ತುಂಗ ಬಿಂಬ

ಸತ್ಯ ಮತ್ತು ಧೈರ್ಯದ ಧ್ವನಿ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: 04 ಸಂಚಿಕೆ: 128 ರಾಯಚೂರು 30-10-2026 ಶುಕ್ರವಾರ ಪುಟ : 04 ಬೆಲೆ: ₹ 2.00 Postal Reg No.: RCR/L/RNP/95/2025-27 ಸಂಪಾದಕರು : ಗುರುರಾಜ ಕೆ

Vol: 04 Issue: 128 Raichur 30-10-2026 Friday Page: 04 Price: ₹ 2.00 tungabimba@gmail.com Editor: Gururaja K 98863 85685



ನ. 1ರಿಂದ ನಂದಿನಿ ಹಾಲಿನ ದರ ಲೀಟರ್‌ಗೆ ₹8 ಏರಿಕೆ: ಸಚಿವ ಸಂಪುಟ ಒಪ್ಪಿಗೆ

ಬೆಂಗಳೂರು, ಅ.29: ರಾಜ್ಯದ ಹಾಲು ಗ್ರಾಹಕರಿಗೆ ಮತ್ತೊಂದು ಬೆಲೆ ಏರಿಕೆಯ ಬಿಸಿ ತಟ್ಟಲಿದ್ದು, ನಂದಿನಿ ಹಾಲಿನ ಮಾರಾಟ ದರವನ್ನು ಪ್ರತಿ ಲೀಟರ್‌ಗೆ ₹8 ಹೆಚ್ಚಿಸಲು ರಾಜ್ಯ ಸಚಿವ ಸಂಪುಟ ಒಪ್ಪಿಗೆ ನೀಡಿದೆ. ಪರಿಷ್ಕೃತ ದರ ನವೆಂಬರ್ 1ರಿಂದ ಜಾರಿಗೆ ಬರಲಿದೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ.

ವಿಧಾನಸೌಧದಲ್ಲಿ ಗುರುವಾರ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಹಾಲಿನ ದರ ಪರಿಷ್ಕರಣೆ ಕುರಿತು ಚರ್ಚಿಸಿ ಸರ್ವಾನುಮತದಿಂದ ತೀರ್ಮಾನ ಕೈಗೊಳ್ಳಲಾಗಿದೆ ಎಂದು ಸಚಿವರು ಮಾಹಿತಿ ನೀಡಿದ್ದಾರೆ.

ಹಾಲಿನ ದರ ಏರಿಕೆಯಿಂದ ಸಂಗ್ರಹವಾಗುವ ಹೆಚ್ಚುವರಿ ₹8ರಲ್ಲಿ ₹7 ಅನ್ನು ನೇರವಾಗಿ ಹಾಲು ಉತ್ಪಾದಕರಿಗೆ ನೀಡಲಾಗುವುದು. ಉಳಿದ ₹1 ಕರ್ನಾಟಕ ಹಾಲು ಮಹಾಮಂಡಳಿಗೆ (ಕೆಎಂಎಫ್) ದೊರೆಯಲಿದೆ. ಈ ಮೂಲಕ



ಹೈನುಗಾರಿಕೆಯಲ್ಲಿ ತೊಡಗಿರುವ ರೈತರಿಗೆ ಹೆಚ್ಚಿನ ಆರ್ಥಿಕ ನೆರವು ಒದಗಿಸುವ ಉದ್ದೇಶ ಹೊಂದಲಾಗಿದೆ ಎಂದು ವಿವರಿಸಿದ್ದಾರೆ.

ಪ್ರಸ್ತುತ ಹಾಲು ಉತ್ಪಾದಕರಿಗೆ ಪ್ರತಿ ಲೀಟರ್‌ಗೆ ₹35 ಪಾವತಿಸಲಾಗುತ್ತಿದ್ದು, ಹೊಸ ದರ ಜಾರಿಯಾದ ಬಳಿಕ ₹42 ದೊರೆಯಲಿದೆ. ಇದರ ಜತೆಗೆ ಸರ್ಕಾರ ನೀಡುತ್ತಿರುವ ₹5 ಪ್ರೋತ್ಸಾಹಧನ ಸೇರಿ ರೈತರಿಗೆ ಪ್ರತಿ ಲೀಟರ್ ಹಾಲಿಗೆ ಒಟ್ಟು ₹47 ಸಿಗಲಿದೆ ಎಂದು ತಿಳಿಸಿದ್ದಾರೆ.

ಹಾಲು ಉತ್ಪಾದನಾ ವೆಚ್ಚ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ರೈತರಿಗೆ ಹೆಚ್ಚಿನ ದರ ನೀಡಬೇಕೆಂಬ ಬೇಡಿಕೆ ಕೇಳಿಬರುತ್ತಿತ್ತು. ಈ ಹಿನ್ನೆಲೆಯಲ್ಲಿ ಹಾಲು ಉತ್ಪಾದಕರ ಹಿತಾಸಕ್ತಿ ಗಮನದಲ್ಲಿಟ್ಟುಕೊಂಡು ದರ ಪರಿಷ್ಕರಣೆಗೆ ಸರ್ಕಾರ ಮುಂದಾಗಿದೆ ಎಂದು ಹೇಳಲಾಗಿದೆ.

ಹಿಂದಿನ ಸಚಿವ ಸಂಪುಟ ಸಭೆಯಲ್ಲಿಯೇ ನಂದಿನಿ ಹಾಲಿನ ದರ ಹೆಚ್ಚಿಸುವ ಕುರಿತು ಚರ್ಚಿಸಿ ಒಪ್ಪಿಗೆ ನೀಡಲಾಗಿತ್ತು. ಆದರೆ ವಿಧಾನ ಪರಿಷತ್ ಚುನಾವಣೆಯ ನೀತಿ ಸಂಹಿತೆ ಜಾರಿಯಲ್ಲಿದ್ದ ಕಾರಣ ಅಂತಿಮ ನಿರ್ಧಾರವನ್ನು ಮುಂದೂಡಲಾಗಿತ್ತು. ಇದೀಗ ಚುನಾವಣಾ ಪ್ರಕ್ರಿಯೆ ಪೂರ್ಣಗೊಂಡ ಬೆನ್ನಲ್ಲೇ ದರ ಏರಿಕೆಗೆ ಅನುಮೋದನೆ ನೀಡಲಾಗಿದೆ.

ಹಾಲಿನ ದರ ಹೆಚ್ಚಳದಿಂದ ಹೈನುಗಾರರಿಗೆ ಹೆಚ್ಚಿನ ಆದಾಯ ದೊರೆಯುವ ನಿರೀಕ್ಷೆಯಿದ್ದರೂ, ನಿತ್ಯ ಹಾಲು ಖರೀದಿಸುವ ಕುಟುಂಬಗಳ ಮಾಸಿಕ ಖರ್ಚು ಹೆಚ್ಚಾಗಲಿದೆ. ವಿಶೇಷವಾಗಿ ಬಡ ಮತ್ತು ಮಧ್ಯಮ ವರ್ಗದ ಕುಟುಂಬಗಳಿಗೆ ಈ ದರ ಪರಿಷ್ಕರಣೆ ಹೆಚ್ಚುವರಿ ಆರ್ಥಿಕ ಹೊರೆಯಾಗುವ ಸಾಧ್ಯತೆಯಿದೆ.

ನವೆಂಬರ್ 1ರಿಂದ ಪರಿಷ್ಕೃತ ದರ ಜಾರಿಗೆ ಬರಲಿರುವ ಹಿನ್ನೆಲೆಯಲ್ಲಿ ನಂದಿನಿ ಹಾಲಿನ ವಿವಿಧ ಮಾದರಿಗಳ ಹೊಸ ಮಾರಾಟ ದರಗಳ ಕುರಿತು ಕೆಎಂಎಫ್‌ನ ಅಧಿಕೃತ ಪ್ರಕಟಣೆ ನಿರೀಕ್ಷಿಸಲಾಗಿದೆ.

₹1 ಕೋಟಿ ವೆಚ್ಚದ ಅಂಬೇಡ್ಕರ್ ಭವನಕ್ಕೆ ಉದ್ಘಾಟನೆ ಭಾಗ್ಯವಿಲ್ಲ; ಬೀದಿ ನಾಯಿಗಳ ತಾಣವಾದ ಸಾರ್ವಜನಿಕ ಕಟ್ಟಡ!

ದೇವದುರ್ಗ, ಅ. 29: ಪಟ್ಟಣದಲ್ಲಿ ಸುಮಾರು ₹1 ಕೋಟಿ ಸಾರ್ವಜನಿಕ ಹಣ ವೆಚ್ಚ ಮಾಡಿ ನಿರ್ಮಿಸಲಾದ ಡಾ. ಬಿ.ಆರ್. ಅಂಬೇಡ್ಕರ್ ಭವನ ವರ್ಷಗಳೇ ಕಳೆದರೂ ಉದ್ಘಾಟನೆ ಕಾಣದೆ ನಿರ್ಲಕ್ಷ್ಯಕ್ಕೆ ಒಳಗಾಗಿದೆ. ಸಾರ್ವಜನಿಕರ ಸಭೆ, ಸಮಾರಂಭ ಹಾಗೂ ಸಾಮಾಜಿಕ ಚಟುವಟಿಕೆಗಳಿಗೆ ಬಳಕೆಯಾಗಬೇಕಿದ್ದ ಭವ್ಯ ಕಟ್ಟಡ ಇದೀಗ ಬೀದಿ ನಾಯಿಗಳ ಆಶ್ರಯ ತಾಣವಾಗಿ ಮಾರ್ಪಟ್ಟಿರುವುದು ಸ್ಥಳೀಯರ ತೀವ್ರ ಆಕ್ರೋಶಕ್ಕೆ ಕಾರಣವಾಗಿದೆ.

ಸಮಾಜದ ಎಲ್ಲ ವರ್ಗದ ಜನರಿಗೆ ಅನುಕೂಲವಾಗಲಿ ಎಂಬ ಉದ್ದೇಶದಿಂದ ನಿರ್ಮಿಸಲಾದ ಈ ಭವನದ ನಿರ್ವಹಣೆಗೆ ಸಂಬಂಧಪಟ್ಟ ಅಧಿಕಾರಿಗಳು ಗಮನಹರಿಸದ ಪರಿಣಾಮ ಕಟ್ಟಡ ದುಸ್ಥಿತಿಗೆ ತಲುಪಿದೆ ಎಂಬ ಆರೋಪ ಕೇಳಿಬಂದಿದೆ. ಕಟ್ಟಡದೊಳಗೆ ಸತ್ತ ನಾಯಿಗಳ ಅವಶೇಷಗಳು ಕೊಳೆಯುತ್ತಿದ್ದು, ತೀವ್ರ ದುರ್ವಾಸನೆ ಹರಡುತ್ತಿದೆ. ಕಿಟಕಿಗಳ ಗಾಜುಗಳು



ಒಡೆದುಹೋಗಿದ್ದು, ಕಟ್ಟಡದ ಒಳಾಂಗಣದಲ್ಲಿಯೂ ಸ್ವಚ್ಛತೆಯ ಕೊರತೆ ಎದ್ದು ಕಾಣುತ್ತಿದೆ ಎಂದು ಸ್ಥಳೀಯರು ದೂರಿದ್ದಾರೆ.

ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಿದ ಕಟ್ಟಡ ಸಾರ್ವಜನಿಕರ ಉಪಯೋಗಕ್ಕೆ ಬಾರದೆ ಹಾಳಾಗುತ್ತಿರುವುದು ಆಡಳಿತ ವ್ಯವಸ್ಥೆಯ ಕಾರ್ಯವೈಖರಿಯ ಬಗ್ಗೆ ಗಂಭೀರ ಪ್ರಶ್ನೆಗಳನ್ನು ಹುಟ್ಟುಹಾಕಿದೆ. ಕಟ್ಟಡ ನಿರ್ಮಾಣಕ್ಕೆ ತೋರಿದ ಆಸಕ್ತಿಯನ್ನು ಅದರ 2ನೇ ಪುಟಕ್ಕೆ

76 ಜೋಡಿಗಳ ದಾಂಪತ್ಯ ಜೀವನಕ್ಕೆ ಚಾಲನೆ: ಸಾಮೂಹಿಕ ವಿವಾಹಗಳು ಸಮಾಜಕ್ಕೆ ಮಾದರಿ ಎಂದ ಶಾಸಕಿ ಕರಿಯಮ್ಮ ನಾಯಕ

ಜಾಲಹಳ್ಳಿ, ಅ.29: ಸಾಮೂಹಿಕ ವಿವಾಹಗಳು ಬಡ ಹಾಗೂ ಮಧ್ಯಮ ವರ್ಗದ ಕುಟುಂಬಗಳ ಆರ್ಥಿಕ ಹೊರೆಯನ್ನು ತಗ್ಗಿಸುವುದರ ಜತೆಗೆ ಸಮಾಜದಲ್ಲಿ ಸಮಾನತೆ, ಸಹಬಾಳ್ವೆ ಮತ್ತು ಸಾಮರಸ್ಯವನ್ನು ಬೆಳೆಸಲು ಸಹಕಾರಿಯಾಗುತ್ತವೆ ಎಂದು ದೇವದುರ್ಗ ಕ್ಷೇತ್ರದ ಶಾಸಕಿ ಕರಿಯಮ್ಮ ಜಿ. ನಾಯಕ ಹೇಳಿದರು.

ಪಟ್ಟಣದ ಶ್ರೀ ಲಕ್ಷ್ಮೀ ರಂಗನಾಥ ಸ್ವಾಮಿ ದೇವಸ್ಥಾನದ ಆವರಣದಲ್ಲಿ ಗೋವಿಂದ ಸೇವಾ ಸಮಿತಿಯ ಆಶ್ರಯದಲ್ಲಿ ಆಯೋಜಿಸಿದ್ದ 76 ಜೋಡಿಗಳ ಸಾಮೂಹಿಕ ವಿವಾಹ ಸಮಾರಂಭದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಮದುವೆ ಪ್ರತಿಯೊಬ್ಬರ ಜೀವನದ ಮಹತ್ವದ ಘಟ್ಟವಾಗಿದ್ದು, ಇತ್ತೀಚಿನ ದಿನಗಳಲ್ಲಿ ವಿವಾಹ ಸಮಾರಂಭಗಳಿಗಾಗಿ ದುಂದು ವೆಚ್ಚ ಮಾಡುವ ಪ್ರವೃತ್ತಿ ಹೆಚ್ಚುತ್ತಿದೆ. ಇದರಿಂದ ಬಡ ಹಾಗೂ ಮಧ್ಯಮ ವರ್ಗದ ಕುಟುಂಬಗಳು ಆರ್ಥಿಕ ಸಂಕಷ್ಟಕ್ಕೆ ಸಿಲುಕುವಂತಾಗಿದೆ. ಇಂತಹ ಸಂದರ್ಭದಲ್ಲಿ ಎಲ್ಲ ಸಮುದಾಯದ



ಜನರನ್ನು ಒಗ್ಗೂಡಿಸಿ ಸಾಮೂಹಿಕ ವಿವಾಹಗಳನ್ನು ಆಯೋಜಿಸುವುದು ಸಮಾಜಕ್ಕೆ ಮಾದರಿಯಾದ ಕಾರ್ಯವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಗೋವಿಂದ ಸೇವಾ ಸಮಿತಿಯು ಎಲ್ಲರ ಸಹಕಾರದೊಂದಿಗೆ 76 ಜೋಡಿಗಳ ವಿವಾಹವನ್ನು ಯಶಸ್ವಿಯಾಗಿ ನೆರವೇರಿಸಿರುವುದು ಶ್ಲಾಘನೀಯ. ಇಂತಹ ಕಾರ್ಯಕ್ರಮಗಳ ಮೂಲಕ ಅನಗತ್ಯ ಖರ್ಚುಗಳಿಗೆ ಕಡಿವಾಣ ಹಾಕುವುದರ ಜತೆಗೆ ಸಾಮಾಜಿಕ ತಾರತಮ್ಯವನ್ನು ದೂರಮಾಡಲು ಸಾಧ್ಯವಾಗುತ್ತದೆ ಎಂದರು.

ಶಾಸಕಿಯಾಗಿ ಆಯ್ಕೆಯಾದ ಬಳಿಕ ಜಾಲಹಳ್ಳಿ ಗ್ರಾಮದಲ್ಲಿ ಶಾಲಾ ಕಟ್ಟಡ, ರಸ್ತೆ ನಿರ್ಮಾಣ ಸೇರಿದಂತೆ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಆದ್ಯತೆ ನೀಡಲಾಗಿದೆ. ಕಳೆದ ಮೂರು ವರ್ಷಗಳಿಂದ ಸಾಮೂಹಿಕ ವಿವಾಹದಲ್ಲಿ ಪಾಲ್ಗೊಳ್ಳುವ ವಧುಗಳಿಗೆ ಮಾಂಗಲ್ಯ ನೀಡುವ ಮೂಲಕ ತಮ್ಮ ಕೈಲಾದ ಸೇವೆ ಸಲ್ಲಿಸುತ್ತಿದ್ದೇನೆ. ಆರ್ಥಿಕವಾಗಿ ಹಿಂದುಳಿದ ಕುಟುಂಬಗಳಿಗೆ ನೆರವಾಗುವ ಇಂತಹ ಕಾರ್ಯಕ್ರಮಗಳಿಗೆ ಸಾರ್ವಜನಿಕರು ಹೆಚ್ಚಿನ ಪ್ರೋತ್ಸಾಹ ನೀಡಬೇಕು ಎಂದು ಕರೆ ನೀಡಿದರು. 2ನೇ ಪುಟಕ್ಕೆ

ರಕ್ತನಿಧಿ ಕೇಂದ್ರಕ್ಕೆ ಜಿಲ್ಲಾಮಟ್ಟದ ಸೌಲಭ್ಯ ಒದಗಿಸಲು ಸಂಸದ ಜಿ. ಕುಮಾರ ನಾಯಕ ಒತ್ತಾಯ

ದೇವದುರ್ಗ, ಅ. 29: ದೇವದುರ್ಗ ಪಟ್ಟಣದಲ್ಲಿರುವ ರಕ್ತನಿಧಿ ಕೇಂದ್ರವನ್ನು ಆಧುನಿಕ ಸೌಲಭ್ಯಗಳೊಂದಿಗೆ ಮೇಲ್ದರ್ಜೆಗೇರಿಸಿ, ಜಿಲ್ಲಾಮಟ್ಟದ ರಕ್ತನಿಧಿ ಕೇಂದ್ರಕ್ಕೆ ಸಮಾನವಾದ ಸೌಲಭ್ಯಗಳನ್ನು ಒದಗಿಸುವ ಮೂಲಕ ಕಲ್ಯಾಣ ಕರ್ನಾಟಕ ಭಾಗಕ್ಕೆ ಮಾದರಿಯಾಗಿ ಅಭಿವೃದ್ಧಿಪಡಿಸಬೇಕು ಎಂದು ರಾಯಚೂರು ಯಾದಗಿರಿ ಲೋಕಸಭಾ ಕ್ಷೇತ್ರದ ಸಂಸದ ಜಿ. ಕುಮಾರ ನಾಯಕ ಅಭಿಪ್ರಾಯಪಟ್ಟರು.

ಪಟ್ಟಣದ ರಕ್ತನಿಧಿ ಕೇಂದ್ರಕ್ಕೆ ಭೇಟಿ ನೀಡಿ ಅಲ್ಲಿನ ಕಾರ್ಯನಿರ್ವಹಣೆ, ಲಭ್ಯವಿರುವ ಸೌಲಭ್ಯಗಳು ಹಾಗೂ ರಕ್ತ ಸಂಗ್ರಹಣೆ ವ್ಯವಸ್ಥೆಯನ್ನು ವೀಕ್ಷಿಸಿದ ಅವರು, ಕೇಂದ್ರದ ವ್ಯವಸ್ಥಾಪಕ ವಿಶ್ವನಾಥ ಕೋರಿ ಅವರ ಸೇವಾ ಕಾರ್ಯವನ್ನು ಶ್ಲಾಘಿಸಿ ಅಭಿನಂದಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಂಸದರು, ರಕ್ತದಾನವು ಅತ್ಯಂತ ಶ್ರೇಷ್ಠ ಮಾನವೀಯ ಸೇವೆಯಾಗಿದ್ದು, ತುರ್ತು ಸಂದರ್ಭಗಳಲ್ಲಿ ರಕ್ತದ ಲಭ್ಯತೆ ಅನೇಕ ಅಮೂಲ್ಯ ಜೀವಗಳನ್ನು ಉಳಿಸಲು ನೆರವಾಗುತ್ತದೆ. ಹೀಗಾಗಿ ತಾಲೂಕು ಮಟ್ಟದಲ್ಲಿ



ಕಾರ್ಯನಿರ್ವಹಿಸುತ್ತಿರುವ ರಕ್ತನಿಧಿ ಕೇಂದ್ರಗಳಿಗೆ ಅಗತ್ಯ ಮೂಲಸೌಕರ್ಯ, ಆಧುನಿಕ ವೈದ್ಯಕೀಯ ಉಪಕರಣಗಳು ಹಾಗೂ ತಾಂತ್ರಿಕ ಸೌಲಭ್ಯಗಳನ್ನು ಕಲ್ಪಿಸುವುದು ಅತ್ಯಗತ್ಯವಾಗಿದೆ ಎಂದು ತಿಳಿಸಿದರು.

ದೇವದುರ್ಗ ತಾಲೂಕು ಅಭಿವೃದ್ಧಿಯಲ್ಲಿ ಹಿಂದುಳಿದ ಪ್ರದೇಶವೆಂಬ ಹಣೆಪಟ್ಟಿಯಿಂದ ಹೊರಬರಬೇಕಾದರೆ ಆರೋಗ್ಯ, ಶಿಕ್ಷಣ ಹಾಗೂ ಮೂಲಸೌಕರ್ಯಗಳ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಬೇಕು. ವಿಶೇಷವಾಗಿ ಗ್ರಾಮೀಣ ಪ್ರದೇಶದ ಬಡವರು ಮತ್ತು ಸಾಮಾನ್ಯ ಜನರಿಗೆ ಗುಣಮಟ್ಟದ ವೈದ್ಯಕೀಯ ಸೇವೆಗಳು ಸ್ಥಳೀಯವಾಗಿಯೇ ದೊರೆಯುವಂತಾಗಬೇಕು ಎಂದು ಹೇಳಿದರು.

ದೇವದುರ್ಗದ ರಕ್ತನಿಧಿ ಕೇಂದ್ರವನ್ನು ಜಿಲ್ಲಾಮಟ್ಟದ ಸೌಲಭ್ಯಗಳೊಂದಿಗೆ ಅಭಿವೃದ್ಧಿಪಡಿಸುವ ಮೂಲಕ ರಕ್ತದ ಅಗತ್ಯವಿರುವ ರೋಗಿಗಳಿಗೆ ಸಕಾಲದಲ್ಲಿ ನೆರವಾಗುವ ವ್ಯವಸ್ಥೆಯನ್ನು ಬಲಪಡಿಸಬೇಕು. ಈ ನಿಟ್ಟಿನಲ್ಲಿ ಕೈಗೊಳ್ಳುವ ಅಭಿವೃದ್ಧಿ ಕಾರ್ಯಗಳಿಗೆ ತಮ್ಮಿಂದ ಸಾಧ್ಯವಿರುವ ಸಹಕಾರ ನೀಡುವುದಾಗಿ ಸಂಸದ ಜಿ. ಕುಮಾರ ನಾಯಕ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ರಾಜಶೇಖರ ನಾಯಕ, ಜಿಲ್ಲಾಧ್ಯಕ್ಷ ಶಾಂತಪ್ಪ, ಪ್ರಕಾಶ ಖೇಣೇದ, ಬಸವರಾಜಪ್ಪ ಬಂಡೇಗುಡ್ಡ ಸಾಹು, ಶರಣಗೌಡ ಗೌರಂಪೇಟ ಸೇರಿದಂತೆ ಹಲವು ಮುಖಂಡರು ಹಾಗೂ ಇತರರು ಉಪಸ್ಥಿತರಿದ್ದರು.



ಚಿಕ್ಕಸೂಗೂರಿನಲ್ಲಿ ಅ.30ರಂದು ಶ್ರೀ ಸಿದ್ಧರಾಮೇಶ್ವರರ ಭವ್ಯ ರಥೋತ್ಸವ



ರಾಯಚೂರು, ಅ.29: ತಾಲೂಕಿನ ಚಿಕ್ಕಸೂಗೂರಿನ ಶ್ರೀ ಸಿದ್ಧರಾಮೇಶ್ವರ ಮಠದ 128ನೇ ಜಾತ್ರಾ ಮಹೋತ್ಸವವು ಅಕ್ಟೋಬರ್ 24ರಿಂದ 31ರವರೆಗೆ ವಿವಿಧ ಧಾರ್ಮಿಕ, ಆಧ್ಯಾತ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳೊಂದಿಗೆ ನಡೆಯುತ್ತಿದ್ದು, ಅಕ್ಟೋಬರ್ 30ರಂದು ಸಂಜೆ 5.30ಕ್ಕೆ ಶ್ರೀ ಸಿದ್ಧರಾಮೇಶ್ವರರ ಭವ್ಯ ರಥೋತ್ಸವ ಜರುಗಲಿದೆ ಎಂದು ಮಠದ ಪೀಠಾಧ್ಯಕ್ಷ ಜಗದ್ಗುರು ಡಾ. ಸಿದ್ಧಲಿಂಗ ಮಹಾಸ್ವಾಮಿಗಳು ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶರಣ ಸಂಸ್ಕೃತಿ ಮತ್ತು ಧಾರ್ಮಿಕ ಪರಂಪರೆಯನ್ನು ಉಳಿಸಿ ಬೆಳೆಸುವ ಉದ್ದೇಶದಿಂದ ಪ್ರತಿವರ್ಷ ಜಾತ್ರಾ ಮಹೋತ್ಸವವನ್ನು ಆಚರಿಸಲಾಗುತ್ತಿದೆ. ಈ ಬಾರಿಯೂ ಭಕ್ತರ ಸಹಕಾರದೊಂದಿಗೆ ಎಂಟು ದಿನಗಳ ಕಾಲ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದು ಹೇಳಿದರು.

ಜಾತ್ರೆಯ ಅಂಗವಾಗಿ ಅಕ್ಟೋಬರ್ 24ರಂದು ಲಿಂಗೈಕ್ಯ ಶ್ರೀ ಸಿದ್ಧರಾಮ ಸ್ವಾಮಿಗಳ 22ನೇ ಪುಣ್ಯಸ್ಮರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಅಕ್ಟೋಬರ್ 24ರಿಂದ 31ರವರೆಗೆ ಪ್ರತಿದಿನ ಸಂಜೆ 7ರಿಂದ ರಾತ್ರಿ 9ರವರೆಗೆ ಅಜಾತ ನಾಗಲಿಂಗ ಪುರಾಣ ಪ್ರವಚನ ನಡೆಯುತ್ತಿದ್ದು, ಪಡಗದಹಳ್ಳಿಯ ಹಿರೇಮಠದ ಮಹಾಲಿಂಗಯ್ಯ ಶಾಸ್ತ್ರಿಗಳು ಪ್ರವಚನ ನೀಡುತ್ತಿದ್ದಾರೆ ಎಂದು ತಿಳಿಸಿದರು.

ಅಕ್ಟೋಬರ್ 30ರಂದು ಮಹಾರುದ್ರಾಭಿಷೇಕ, ಗಡಾರಾಧನೆ ಹಾಗೂ ಧರ್ಮಸಭೆ ನಡೆಯಲಿದ್ದು, ವಿವಿಧ ಮಠಗಳ ಪೂಜ್ಯರು ಸಾನ್ನಿಧ್ಯ ವಹಿಸಲಿದ್ದಾರೆ. ಅಂದು ಸಂಜೆ 5.30ಕ್ಕೆ ಶ್ರೀ ಸಿದ್ಧರಾಮೇಶ್ವರರ ರಥೋತ್ಸವವು ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ನೆರವೇರಲಿದೆ. ರಥೋತ್ಸವದಲ್ಲಿ ಸುತ್ತಮುತ್ತಲಿನ ಗ್ರಾಮಗಳ ಸಾವಿರಾರು ಭಕ್ತರು ಭಾಗವಹಿಸುವ ನಿರೀಕ್ಷೆಯಿದೆ ಎಂದರು.

ಅಕ್ಟೋಬರ್ 31ರಂದು ಸಂಜೆ ಉದ್ಘಾಟನಾ ಮಹೋತ್ಸವ ಹಾಗೂ ಸಾಂಪ್ರದಾಯಿಕ ಕಡುಬಿನ ಕಾಳಗ ಕಾರ್ಯಕ್ರಮ ಜರುಗಲಿದೆ. ಜಾತ್ರೆಯ ಅಂಗವಾಗಿ ಶಾಸ್ತ್ರೀಯ ಸಂಗೀತ, ಭರತನಾಟ್ಯ, ನೃತ್ಯರೂಪಕ, ವಚನ ಸಂಗೀತ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿದೆ. ಧಾರ್ಮಿಕ ಕಾರ್ಯಕ್ರಮಗಳ ಜತೆಗೆ ಕಲಾವಿದರಿಗೆ ತಮ್ಮ ಪ್ರತಿಭೆ ಪ್ರದರ್ಶಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ವಿವರಿಸಿದರು.

ಜಾತ್ರಾ ಮಹೋತ್ಸವದಲ್ಲಿ ವಿವಿಧ ಮಠಗಳ ಸ್ವಾಮೀಜಿಗಳು, ಜನಪ್ರತಿನಿಧಿಗಳು, ಧಾರ್ಮಿಕ ಮುಖಂಡರು ಹಾಗೂ ಗಣ್ಯರು ಭಾಗವಹಿಸಲಿದ್ದಾರೆ. ಚಿಕ್ಕಸೂಗೂರು, ಹೊಸಪೇಟೆ, ಗಾಣಧಾಳ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಭಕ್ತರು ಜಾತ್ರೆಯ ಯಶಸ್ಸಿಗೆ ಸಹಕಾರ ನೀಡುತ್ತಿದ್ದಾರೆ ಎಂದು ತಿಳಿಸಿದರು.

ಶ್ರೀ ಸಿದ್ಧರಾಮೇಶ್ವರ ಮಠವು ಧಾರ್ಮಿಕ ಆಚರಣೆಗಳ ಜತೆಗೆ ಶರಣರ ತತ್ವಾದರ್ಶಗಳು, ಸಾಮಾಜಿಕ ಸಾಮರಸ್ಯ ಹಾಗೂ ಮಾನವೀಯ ಮೌಲ್ಯಗಳನ್ನು ಜನರಿಗೆ ತಲುಪಿಸುವ ಕಾರ್ಯ ಮಾಡುತ್ತಿದೆ. ಜಾತ್ರಾ ಮಹೋತ್ಸವವು ಭಕ್ತರಲ್ಲಿ ಭಕ್ತಿ, ಶ್ರದ್ಧೆ ಮತ್ತು ಒಗ್ಗಟ್ಟಿನ ಭಾವನೆ ಬೆಳೆಸುವ ಮಹತ್ವದ ಧಾರ್ಮಿಕ ಕಾರ್ಯಕ್ರಮವಾಗಿದೆ ಎಂದು ಶ್ರೀಗಳು ಹೇಳಿದರು.

ರಾಯಚೂರು ಜಿಲ್ಲೆ ಸೇರಿದಂತೆ ಕರ್ನಾಟಕ ಹಾಗೂ ನೆರೆಯ ತೆಲಂಗಾಣದ ವಿವಿಧ ಭಾಗಗಳ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ರಥೋತ್ಸವ ಮತ್ತು ಧಾರ್ಮಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡು ಶ್ರೀ ಸಿದ್ಧರಾಮೇಶ್ವರರ ಆಶೀರ್ವಾದ ಪಡೆಯಬೇಕು ಎಂದು ಜಗದ್ಗುರು ಡಾ. ಸಿದ್ಧಲಿಂಗ ಮಹಾಸ್ವಾಮಿಗಳು ಮನವಿ ಮಾಡಿದರು.

ಜಿಲ್ಲಾ 12ನೇ ಕನ್ನಡ ಸಾಹಿತ್ಯ ಸಮ್ಮೇಳನ: ಪುಸ್ತಕ ಮತ್ತು ವಾಣಿಜ್ಯ ಮಳಿಗೆಗಳ ನೋಂದಣಿಗೆ ಆಹ್ವಾನ

ರಾಯಚೂರು, ಅ. 29: ನಗರದ ಪಂಡಿತ್ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ನವೆಂಬರ್ 14 ಮತ್ತು 15ರಂದು ನಡೆಯಲಿರುವ ರಾಯಚೂರು ಜಿಲ್ಲಾ 12ನೇ ಕನ್ನಡ ಸಾಹಿತ್ಯ ಸಮ್ಮೇಳನದ ಅಂಗವಾಗಿ ಪುಸ್ತಕ ಮಾರಾಟ ಹಾಗೂ ವಾಣಿಜ್ಯ ಮಳಿಗೆಗಳನ್ನು ತೆರೆಯಲು ಆಸಕ್ತರಿಂದ ನೋಂದಣಿಗೆ ಅರ್ಜಿ ಆಹ್ವಾನಿಸಲಾಗಿದೆ.

ಎರಡು ದಿನಗಳ ಕಾಲ ನಡೆಯುವ ಸಾಹಿತ್ಯ ಸಮ್ಮೇಳನದಲ್ಲಿ ಪುಸ್ತಕ ಪ್ರಕಾಶಕರು, ಮಾರಾಟಗಾರರು ಹಾಗೂ ವಿವಿಧ ವಾಣಿಜ್ಯ ವ್ಯಾಪಾರಸ್ಥರಿಗೆ ಮಳಿಗೆಗಳನ್ನು ತೆರೆಯಲು ಅವಕಾಶ ಕಲ್ಪಿಸಲಾಗಿದೆ. ಮಳಿಗೆಗಳನ್ನು ಪಡೆಯಲು ಇಚ್ಛಿಸುವವರು ನವೆಂಬರ್ 7ರೊಳಗೆ ತಮ್ಮ ಹೆಸರು ನೋಂದಾಯಿಸಿಕೊಳ್ಳುವಂತೆ ಕನ್ನಡ ಸಾಹಿತ್ಯ ಪರಿಷತ್ತು ತಿಳಿಸಿದೆ.

ಸಮ್ಮೇಳನದ ಎರಡು ದಿನಗಳ ಅವಧಿಗೆ ಪುಸ್ತಕ ಮಳಿಗೆಗಳಿಗೆ ₹1,000 ಹಾಗೂ ವಾಣಿಜ್ಯ ಮಳಿಗೆಗಳಿಗೆ ₹2,000 ನೋಂದಣಿ ಶುಲ್ಕ ನಿಗದಿಪಡಿಸಲಾಗಿದೆ. ಮಳಿಗೆಗಳ ಹಂಚಿಕೆಯಲ್ಲಿ ಮೊದಲು ನೋಂದಾಯಿಸಿಕೊಳ್ಳುವವರಿಗೆ ಆದ್ಯತೆ ನೀಡಲಾಗುವುದು.

ಆಸಕ್ತರು ಹೆಚ್ಚಿನ ಮಾಹಿತಿ ಹಾಗೂ ನೋಂದಣಿಗಾಗಿ ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿ ತಾಯಪ್ಪ ಬಿ. ಹೊಸೂರು (ಮೊ. 9845562576) ಅಥವಾ ಮಳಿಗೆ ಸಮಿತಿ ಅಧ್ಯಕ್ಷ ಎಚ್.ಎಚ್. ಮ್ಯಾದಾರ್ (ಮೊ. 9916938843) ಅವರನ್ನು ಸಂಪರ್ಕಿಸಬಹುದು ಎಂದು ಪರಿಷತ್ತಿನ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಅಮೃತ ವಾಣಿ

ಸಾಧ್ಯವಾದಷ್ಟು ನಮ್ಮ ನಡೆ ನುಡಿಗಳು ನೀತಿ ನಿಯಮದಿಂದ ಕೂಡಿರಲಿ.

1632 ನೆಯ ದಿನಕ್ಕೆ ಏಮ್ಸ್ ಹೋರಾಟ

ನ.1ರಂದು ಕನ್ನಡ ರಾಜ್ಯೋತ್ಸವ ಹಾಗೂ ತ್ರಿಪದಿ ಸಾಹಿತ್ಯ ವಿಚಾರಗೋಷ್ಠಿ



ಲಿಂಗಸುಗೂರು: ಕರ್ನಾಟಕ ಸಾಹಿತ್ಯ ಅಕಾಡೆಮಿ ಬೆಂಗಳೂರು, ತಾಲೂಕು ಚುಟುಕು ಸಾಹಿತ್ಯ ಪರಿಷತ್ತು ಹಾಗೂ ಲಿಂಗಸುಗೂರಿನ ಶಾರದಾ ವಿದ್ಯಾಮಂದಿರ ಪದವಿ ಪೂರ್ವ ಕಾಲೇಜಿನ ಸಹಯೋಗದಲ್ಲಿ ನವೆಂಬರ್ 1ರಂದು ಕನ್ನಡ ರಾಜ್ಯೋತ್ಸವ ಮತ್ತು ತ್ರಿಪದಿ ಸಾಹಿತ್ಯ ವಿಚಾರಗೋಷ್ಠಿ ಆಯೋಜಿಸಲಾಗಿದೆ ಎಂದು ತಾಲೂಕು ಚುಟುಕು ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ದುರ್ಗಾಸಿಂಗ್ ತಿಳಿಸಿದರು.

ಪಟ್ಟಣದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನವೆಂಬರ್ 1ರಂದು ಭಾನುವಾರ ಬೆಳಿಗ್ಗೆ 11 ಗಂಟೆಗೆ ಶಾರದಾ ವಿದ್ಯಾಮಂದಿರ ಪದವಿ ಪೂರ್ವ ಕಾಲೇಜಿನ ಆವರಣದಲ್ಲಿ ಕಾರ್ಯಕ್ರಮ ನಡೆಯಲಿದೆ. ಕನ್ನಡ ಭಾಷೆ, ಸಾಹಿತ್ಯ ಹಾಗೂ ಸಂಸ್ಕೃತಿಯ ಮಹತ್ವವನ್ನು ಜನರಿಗೆ ಪರಿಚಯಿಸುವುದರ ಜತೆಗೆ ಕನ್ನಡ ಸಾಹಿತ್ಯದಲ್ಲಿ ತ್ರಿಪದಿಗಳ ಕೊಡುಗೆ ಕುರಿತು ಅರಿವು ಮೂಡಿಸುವ ಉದ್ದೇಶದಿಂದ ವಿಚಾರಗೋಷ್ಠಿ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾರದಾ ವಿದ್ಯಾಮಂದಿರ ಪದವಿ ಪೂರ್ವ ಕಾಲೇಜಿನ ಅಧ್ಯಕ್ಷ ಹನುಮಂತಗೌಡ ಎಸ್. ಪಾಟೀಲ್ ವಹಿಸಲಿದ್ದು, ಕರ್ನಾಟಕ ಸಾಹಿತ್ಯ ಅಕಾಡೆಮಿಯ ಸದಸ್ಯ ಡಾ. ಸಿ.ಬಿ. ಮಾದಳ್ಳಿ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ ಎಂದು ತಿಳಿಸಿದರು.

ವಿಚಾರಗೋಷ್ಠಿಯಲ್ಲಿ ಪ್ರಾಧ್ಯಾಪಕರಾದ ವಿಜಯಕುಮಾರ ಕಟ್ಟಿಮನಿ ಹಾಗೂ ಸುರೇಶ ಗುರುಗುಂಟಾ ಅವರು ತ್ರಿಪದಿ ಸಾಹಿತ್ಯದ ಕುರಿತು ವಿಶೇಷ ಉಪನ್ಯಾಸ ನೀಡಲಿದ್ದಾರೆ. ಕನ್ನಡ ಸಾಹಿತ್ಯ ಪರಂಪರೆಯಲ್ಲಿ ತ್ರಿಪದಿಗಳ ಸ್ಥಾನ, ಅವುಗಳ ವೈಶಿಷ್ಟ್ಯ ಹಾಗೂ ಸಾಮಾಜಿಕ ಸಂದೇಶಗಳ ಕುರಿತು ವಿಚಾರ ಮಂಡಿಸಲಿದ್ದಾರೆ ಎಂದು ವಿವರಿಸಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಮಹೇಶ ತೋಟದ, ರಾಜಾ ವಾಸುದೇವ ನಾಯಕ, ಮಂಜುನಾಥ ಕಾಮಿನ್, ತಾಲೂಕು ಚುಟುಕು ಸಾಹಿತ್ಯ ಪರಿಷತ್ತಿನ ಗೌರವಾಧ್ಯಕ್ಷ ಡಾ. ಕೆ. ಶಶಿಕಾಂತ ಹಾಗೂ ಕರ್ನಾಟಕ ಸಾಹಿತ್ಯ ಅಕಾಡೆಮಿಯ ಅಧ್ಯಕ್ಷ ಎಲ್.ಎನ್. ಮುಕುಂದರಾಜ್ ಭಾಗವಹಿಸಲಿದ್ದಾರೆ ಎಂದು ಹೇಳಿದರು.

ಕನ್ನಡ ಸಾಹಿತ್ಯದ ವಿವಿಧ ಪ್ರಕಾರಗಳಲ್ಲಿ ತ್ರಿಪದಿ ಸಾಹಿತ್ಯವು ತನ್ನದೇ ಆದ ವಿಶಿಷ್ಟ ಸ್ಥಾನ ಹೊಂದಿದೆ. ಸರಳ ಭಾಷೆಯಲ್ಲಿ ಜೀವನಾನುಭವ, ನೀತಿ, ಸಾಮಾಜಿಕ ಚಿಂತನೆ ಹಾಗೂ ಮಾನವೀಯ ಮೌಲ್ಯಗಳನ್ನು ವ್ಯಕ್ತಪಡಿಸುವ ತ್ರಿಪದಿಗಳ ಮಹತ್ವವನ್ನು ಯುವಪೀಳಿಗೆಗೆ ಪರಿಚಯಿಸುವ ಅಗತ್ಯವಿದೆ. ಈ ಹಿನ್ನೆಲೆಯಲ್ಲಿ ಕನ್ನಡ ರಾಜ್ಯೋತ್ಸವದ ಸಂದರ್ಭದಲ್ಲಿ ಸಾಹಿತ್ಯ ವಿಚಾರಗೋಷ್ಠಿ ಆಯೋಜಿಸಲಾಗಿದೆ ಎಂದು ತಿಳಿಸಿದರು.

ಸಾಹಿತಿಗಳು, ಕನ್ನಡಪರ ಸಂಘಟನೆಗಳ ಪದಾಧಿಕಾರಿಗಳು, ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಸಾಹಿತ್ಯಾಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ದುರ್ಗಾಸಿಂಗ್ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಎನ್. ಕರಿಯಪ್ಪ, ದುರ್ಗಾಸಿಂಗ್, ಮಹೇಶ ತೋಟದ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಸಮುದಾಯ ಆರೋಗ್ಯ ಕೇಂದ್ರದಲ್ಲಿ 12 ವರ್ಷಗಳ ಬಳಿಕ ಉದರದರ್ಶಕ ಸಂತಾನಹರಣ ಶಸ್ತ್ರಚಿಕಿತ್ಸೆ ಪುನರಾರಂಭ



ಸಿಂಧನೂರು, ಅ.28: ಕಳೆದ 12 ವರ್ಷಗಳಿಂದ ಸ್ಥಗಿತಗೊಂಡಿದ್ದ ಉದರದರ್ಶಕ ಸಂತಾನಹರಣ ಶಸ್ತ್ರಚಿಕಿತ್ಸಾ ಸೇವೆಯನ್ನು ತುರ್ವಿಹಾಳ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಪುನರಾರಂಭಿಸಲಾಗಿದ್ದು, ಮೊದಲ ದಿನವೇ ಎಂಟು ಮಹಿಳೆಯರಿಗೆ ಯಶಸ್ವಿಯಾಗಿ ಶಸ್ತ್ರಚಿಕಿತ್ಸೆ ನೆರವೇರಿಸಲಾಗಿದೆ. ಇದರಿಂದ ಗ್ರಾಮೀಣ ಭಾಗದ ಮಹಿಳೆಯರಿಗೆ ಸ್ಥಳೀಯವಾಗಿಯೇ ಕುಟುಂಬ ಕಲ್ಯಾಣ ಸೇವೆ ಲಭ್ಯವಾಗುವಂತಾಗಿದೆ.

ಈ ಹಿಂದೆ ಪ್ರಾಥಮಿಕ ಆರೋಗ್ಯ ಕೇಂದ್ರವಾಗಿದ್ದ ತುರ್ವಿಹಾಳ ಆಸ್ಪತ್ರೆಯಲ್ಲಿ ಸರ್ಕಾರದ ಮಾರ್ಗಸೂಚಿಗಳ ಪ್ರಕಾರ ಉದರದರ್ಶಕ ಶಸ್ತ್ರಚಿಕಿತ್ಸೆ ನಡೆಸಲು ಅವಕಾಶವಿಲ್ಲದ ಕಾರಣ ಸುಮಾರು 12 ವರ್ಷಗಳಿಂದ ಈ ಸೇವೆಯನ್ನು ಸ್ಥಗಿತಗೊಳಿಸಲಾಗಿತ್ತು. ಇದೀಗ ಆಸ್ಪತ್ರೆಯನ್ನು ಸಮುದಾಯ ಆರೋಗ್ಯ ಕೇಂದ್ರವಾಗಿ ಮೇಲ್ದರ್ಜೆಗೇರಿಸಿರುವ ಹಿನ್ನೆಲೆಯಲ್ಲಿ ಅಕ್ಟೋಬರ್ 28ರಂದು ಶಸ್ತ್ರಚಿಕಿತ್ಸಾ ಸೇವೆಗೆ ಮರುಚಾಲನೆ ನೀಡಲಾಗಿದೆ.

ಸಮುದಾಯ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಹಾಗೂ ಪ್ರಸೂತಿ ತಜ್ಞ ಡಾ. ನಾಗರಾಜ ಕಟ್ಟಾ ಅವರ ನೇತೃತ್ವದಲ್ಲಿ ವೈದ್ಯರು ಮತ್ತು ಆರೋಗ್ಯ ಸಿಬ್ಬಂದಿಯ ತಂಡವು ಎಂಟು ಫಲಾನುಭವಿಗಳಿಗೆ ಉದರದರ್ಶಕ ಸಂತಾನಹರಣ ಶಸ್ತ್ರಚಿಕಿತ್ಸೆಯನ್ನು ಯಶಸ್ವಿಯಾಗಿ ನೆರವೇರಿಸಿದೆ.

ಶಸ್ತ್ರಚಿಕಿತ್ಸಾ ತಂಡದಲ್ಲಿ ಅರವಳಿಕೆ ತಜ್ಞೆ ಡಾ. ಕೋನಿಕಾ ಕಟ್ಟಾ, ಮಕ್ಕಳ ತಜ್ಞೆ ಡಾ. ದೀಪಿಕಾ, ವೈದ್ಯಾಧಿಕಾರಿಗಳಾದ ಡಾ. ಶ್ರೀರಾಮ ನಲ್ಲ, ವಿರೂಪಾಕ್ಷಪ್ಪ ಟಿ., ಶುಶ್ರೂಷಾಧಿಕಾರಿಗಳಾದ ಹಸೀನಾ, ರೇಣುಕಾ, ವೆಂಕಟೇಶ, ಹಿರಿಯ ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಜಯಲಕ್ಷ್ಮೀ, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಭಾಗ್ಯಶ್ರೀ ಹಾಗೂ ಡಿ ದರ್ಜೆ ಸಿಬ್ಬಂದಿಗಳಾದ ಪೂಜಾ, ಬಸವರಾಜ, ಹನುಮೇಶ, ರಮೇಶ, ಹನುಮವ್ವ ಮತ್ತು ಶ್ರೀದೇವಿ ಭಾಗವಹಿಸಿದ್ದರು.

ಉದರದರ್ಶಕ ಸಂತಾನಹರಣ ಶಸ್ತ್ರಚಿಕಿತ್ಸೆಯು ಮಹಿಳೆಯರಿಗಾಗಿ ಇರುವ ಶಾಶ್ವತ ಕುಟುಂಬ ಯೋಜನಾ ವಿಧಾನಗಳಲ್ಲಿ ಒಂದಾಗಿದೆ. ದಂಪತಿಗಳು ತಮ್ಮ ಕುಟುಂಬವನ್ನು ಪೂರ್ಣಗೊಳಿಸಿಕೊಂಡು ಮುಂದೆ ಮಕ್ಕಳನ್ನು ಹೊಂದಬಾರದೆಂದು ನಿರ್ಧರಿಸಿದ ಸಂದರ್ಭದಲ್ಲಿ ಈ ವಿಧಾನವನ್ನು ಆಯ್ಕೆ ಮಾಡಿಕೊಳ್ಳಬಹುದು. ಅರ್ಹ ಮಹಿಳೆಯರಿಗೆ ಅಗತ್ಯ ವೈದ್ಯಕೀಯ ತಪಾಸಣೆ, ಸಮಾಲೋಚನೆ ಹಾಗೂ ಸ್ವಯಂಪ್ರೇರಿತ ತಿಳುವಳಿಕೆಯುಳ್ಳ ಒಪ್ಪಿಗೆ ಪಡೆದ ನಂತರವೇ ಶಸ್ತ್ರಚಿಕಿತ್ಸೆ ನಡೆಸಲಾಗುತ್ತದೆ.

ಗ್ರಾಮೀಣ ಪ್ರದೇಶಗಳಲ್ಲಿ ತಜ್ಞ ವೈದ್ಯರ ಕೊರತೆಯಿಂದಾಗಿ ಕುಟುಂಬ ಯೋಜನೆಯ ಶಸ್ತ್ರಚಿಕಿತ್ಸೆಗಾಗಿ ಮಹಿಳೆಯರು ದೂರದ ಆಸ್ಪತ್ರೆಗಳಿಗೆ ತೆರಳಬೇಕಾದ ಪರಿಸ್ಥಿತಿ ಎದುರಾಗುತ್ತಿತ್ತು. ಇದರಿಂದ ಪ್ರಯಾಣದ ವೆಚ್ಚ, ಸಮಯದ ನಷ್ಟ ಹಾಗೂ ಕುಟುಂಬದ ಸದಸ್ಯರಿಗೆ ಹೆಚ್ಚುವರಿ ತೊಂದರೆ ಉಂಟಾಗುತ್ತಿತ್ತು. ಇದೀಗ ತುರ್ವಿಹಾಳದಲ್ಲಿಯೇ ಈ ಸೇವೆ ಆರಂಭವಾಗಿರುವುದರಿಂದ ಸುತ್ತಮುತ್ತಲಿನ ಗ್ರಾಮಗಳ ಮಹಿಳೆಯರಿಗೆ ಅನುಕೂಲವಾಗಲಿದೆ.

ಸುಮಾರು 12 ವರ್ಷಗಳ ನಂತರ ಉದರದರ್ಶಕ ಶಸ್ತ್ರಚಿಕಿತ್ಸೆ ಪುನರಾರಂಭಿಸಿರುವುದು ಗ್ರಾಮೀಣ ಆರೋಗ್ಯ ಸೇವೆಯ ಬಲವರ್ಧನೆಯ ದೃಷ್ಟಿಯಿಂದ ಮಹತ್ವದ ಬೆಳವಣಿಗೆಯಾಗಿದೆ. ಮುಂದಿನ ದಿನಗಳಲ್ಲಿ ಅಗತ್ಯ ವೈದ್ಯಕೀಯ ಸೌಲಭ್ಯಗಳು ಹಾಗೂ ತಜ್ಞರ ಲಭ್ಯತೆಗೆ ಅನುಗುಣವಾಗಿ ಈ ಸೇವೆಯನ್ನು ನಿಯಮಿತವಾಗಿ ಮುಂದುವರಿಸುವ ಉದ್ದೇಶ ಹೊಂದಲಾಗಿದೆ ಎಂದು ಆರೋಗ್ಯ ಕೇಂದ್ರದ ವೈದ್ಯಕೀಯ ತಂಡ ತಿಳಿಸಿದೆ.

ತುರ್ವಿಹಾಳ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಸಂತಾನಹರಣ ಶಸ್ತ್ರಚಿಕಿತ್ಸಾ ಸೇವೆಯನ್ನು ಯಶಸ್ವಿಯಾಗಿ ಪುನರಾರಂಭಿಸಿರುವ ವೈದ್ಯರು ಮತ್ತು ಆರೋಗ್ಯ ಸಿಬ್ಬಂದಿಯ ಕಾರ್ಯವನ್ನು ಮಸ್ಕಿ ವಿಧಾನಸಭಾ ಕ್ಷೇತ್ರದ ಶಾಸಕ ಆರ್. ಬಸನಗೌಡ ತುರ್ವಿಹಾಳ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ನಂದಿತಾ ಎಂ.ಎನ್., ಕಾರ್ಯಕ್ರಮಾಧಿಕಾರಿ ಡಾ. ಶಿವಕುಮಾರ್ ಹಾಗೂ ತಾಲೂಕು ಆರೋಗ್ಯಾಧಿಕಾರಿ ಡಾ. ಅಯ್ಯನಗೌಡ ಮೆಚ್ಚಿ ಅಭಿನಂದಿಸಿದ್ದಾರೆ.

ಸ್ಥಳೀಯ ಮಟ್ಟದಲ್ಲಿಯೇ ಅಗತ್ಯ ಆರೋಗ್ಯ ಸೇವೆಗಳನ್ನು ಒದಗಿಸುವ ಇಂತಹ ಪ್ರಯತ್ನಗಳು ಗ್ರಾಮೀಣ ಜನರ ಆರೋಗ್ಯ ರಕ್ಷಣೆಗೆ ಸಹಕಾರಿಯಾಗಲಿವೆ ಎಂದು ಸಾರ್ವಜನಿಕರು ಸಂತಸ ವ್ಯಕ್ತಪಡಿಸಿದ್ದಾರೆ.

ಮೊದಲನೇ ಪುಟದಿಂದ

₹1 ಕೋಟಿ ವೆಚ್ಚದ ಅಂಬೇಡ್ಕರ್ ಭವನಕ್ಕೆ ಉದ್ಘಾಟನೆ ಭಾಗ್ಯವಿಲ್ಲ; ಬೀದಿ ನಾಯಿಗಳ ತಾಣವಾದ ಸಾರ್ವಜನಿಕ ಕಟ್ಟಡ!

ಉದ್ಘಾಟನೆ ಹಾಗೂ ನಿರ್ವಹಣೆಗೆ ಏಕೆ ತೋರಿಸುತ್ತಿಲ್ಲ ಎಂಬುದು ಸಾರ್ವಜನಿಕರ ಪ್ರಶ್ನೆಯಾಗಿದೆ.

ಡಾ. ಬಿ.ಆರ್. ಅಂಬೇಡ್ಕರ್ ಅವರ ಹೆಸರಿನಲ್ಲಿ ನಿರ್ಮಿಸಿರುವ ಭವನಕ್ಕೆ ಇಂತಹ ದುಸ್ಥಿತಿ ಎದುರಾಗಿರುವುದು ಅವರ ಅಭಿಮಾನಿಗಳು ಹಾಗೂ ಸಾರ್ವಜನಿಕರಲ್ಲಿ ಅಸಮಾಧಾನ ಮೂಡಿಸಿದೆ. ಸಾಮಾಜಿಕ, ಶೈಕ್ಷಣಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ವೇದಿಕೆಯಾಗಬೇಕಿದ್ದ ಭವನ ಬಳಕೆಯಾಗದೆ ಉಳಿದಿರುವುದು ಸಾರ್ವಜನಿಕ ಸಂಪನ್ಮೂಲಗಳ ಸದ್ಬಳಕೆಯ ಕುರಿತೂ ಚರ್ಚೆಗೆ ಕಾರಣವಾಗಿದೆ.

ಕಟ್ಟಡ ನಿರ್ಮಾಣ ಪೂರ್ಣಗೊಂಡು ವರ್ಷಗಳೇ ಕಳೆದಿದ್ದರೂ ಉದ್ಘಾಟನೆಗೆ ಎದುರಾಗಿರುವ ಅಡ್ಡಿಯೇನು? ಕಟ್ಟಡವನ್ನು ಸಂಬಂಧಪಟ್ಟ ಇಲಾಖೆಗೆ ಹಸ್ತಾಂತರಿಸಲಾಗಿದೆಯೇ? ನಿರ್ವಹಣೆಯ ಹೊಣೆ ಯಾರದ್ದು? ಸಾರ್ವಜನಿಕರ ಬಳಕೆಗೆ ಮುಕ್ತಗೊಳಿಸಲು ಇನ್ನೆಷ್ಟು ಸಮಯ ಬೇಕು? ಎಂಬ ಪ್ರಶ್ನೆಗಳಿಗೆ ಸಂಬಂಧಪಟ್ಟ ಅಧಿಕಾರಿಗಳು ಸ್ಪಷ್ಟನೆ ನೀಡಬೇಕೆಂದು ಸ್ಥಳೀಯರು ಆಗ್ರಹಿಸಿದ್ದಾರೆ.

ಅಲ್ಲದೆ, ಕಟ್ಟಡದ ನಿರ್ವಹಣೆಗೆ ಸೂಕ್ತ ಕ್ರಮ ಕೈಗೊಳ್ಳದಿದ್ದರೆ ಈಗಾಗಲೇ ಹಾನಿಗೊಳಗಾಗಿರುವ ಭಾಗಗಳ ದುರಸ್ತಿಗೆ ಮತ್ತಷ್ಟು ಸಾರ್ವಜನಿಕ ಹಣ ವ್ಯಯಿಸಬೇಕಾದ ಪರಿಸ್ಥಿತಿ ಎದುರಾಗಬಹುದು ಎಂಬ ಆತಂಕವೂ ವ್ಯಕ್ತವಾಗಿದೆ.

ಸಂಬಂಧಪಟ್ಟ ಲೋಕೋಪಯೋಗಿ ಇಲಾಖೆ (ಪಿಡಬ್ಲ್ಯೂಡಿ) ಅಧಿಕಾರಿಗಳು ಹಾಗೂ ತಾಲೂಕು ಆಡಳಿತ ತಕ್ಷಣ ಸ್ಥಳಕ್ಕೆ ಭೇಟಿ ನೀಡಿ ಕಟ್ಟಡದ ಸ್ಥಿತಿಗತಿಗಳನ್ನು ಪರಿಶೀಲಿಸಬೇಕು. ಕಟ್ಟಡದೊಳಗಿನ ಕೊಳೆತ ಪ್ರಾಣಿಗಳ ಅವಶೇಷಗಳನ್ನು ತೆರವುಗೊಳಿಸಿ ಸಂಪೂರ್ಣ ಸ್ವಚ್ಛತೆ ಕೈಗೊಳ್ಳಬೇಕು. ಒಡೆದ ಕಿಟಕಿಗಳ ಗಾಜುಗಳನ್ನು ಬದಲಾಯಿಸಿ, ಹಾನಿಗೊಳಗಾದ ಭಾಗಗಳನ್ನು ದುರಸ್ತಿಪಡಿಸಬೇಕು. ಭವನದ ಸುರಕ್ಷತೆ ಮತ್ತು ನಿರ್ವಹಣೆಗೆ ಶಾಶ್ವತ ವ್ಯವಸ್ಥೆ ಕಲ್ಪಿಸಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

₹1 ಕೋಟಿ ವೆಚ್ಚದ ಅಂಬೇಡ್ಕರ್ ಭವನವನ್ನು ಮತ್ತಷ್ಟು ಹಾಳಾಗಲು ಬಿಡದೆ, ಕೂಡಲೇ ಉದ್ಘಾಟಿಸಿ ಸಾರ್ವಜನಿಕರ ಬಳಕೆಗೆ ಮುಕ್ತಗೊಳಿಸುವ ಮೂಲಕ ಕಟ್ಟಡ ನಿರ್ಮಾಣದ ಮೂಲ ಉದ್ದೇಶವನ್ನು ಈಡೇರಿಸಬೇಕು ಎಂಬುದು ಸ್ಥಳೀಯರ ಪ್ರಮುಖ ಬೇಡಿಕೆಯಾಗಿದೆ.

76 ಜೋಡಿಗಳ ದಾಂಪತ್ಯ ಜೀವನಕ್ಕೆ ಚಾಲನೆ: ಸಾಮೂಹಿಕ ವಿವಾಹಗಳು ಸಮಾಜಕ್ಕೆ ಮಾದರಿ ಎಂದ ಶಾಸಕಿ ಕರಿಯಮ್ಮ ನಾಯಕ

ಸಮಾರಂಭದಲ್ಲಿ ಆಶೀರ್ವಚನ ನೀಡಿದ ಕಾಶಿ ಜಗದ್ಗುರು ಡಾ. ಮಲ್ಲಿಕಾರ್ಜುನ ವಿಶ್ವಾರಾಧ್ಯ ಶಿವಾಚಾರ್ಯರು, ಪ್ರಸ್ತುತ ಗ್ರಾಮೀಣ ಪ್ರದೇಶಗಳಲ್ಲಿಯೂ ಒಂದು ವಿವಾಹ ನೆರವೇರಿಸಲು ₹5ರಿಂದ ₹6 ಲಕ್ಷದವರೆಗೆ ವೆಚ್ಚವಾಗುತ್ತಿದೆ. ಸಾಮಾನ್ಯ ಕುಟುಂಬಗಳಿಗೆ ಇಷ್ಟೊಂದು ಹಣ ಹೊಂದಿಸುವುದು ಕಷ್ಟಕರವಾಗಿದೆ. ಈ ಹಿನ್ನೆಲೆಯಲ್ಲಿ ಗೋವಿಂದ ಸೇವಾ ಸಮಿತಿಯು ಸಾಮೂಹಿಕ ವಿವಾಹಗಳನ್ನು ಆಯೋಜಿಸುವ ಮೂಲಕ ಸಮಾಜಮುಖಿ ಕಾರ್ಯ ಮಾಡುತ್ತಿದೆ ಎಂದು ಪ್ರಶಂಸಿಸಿದರು.

ಶ್ರೀ ಲಕ್ಷ್ಮೀ ರಂಗನಾಥ ಸ್ವಾಮಿ ದೇವಸ್ಥಾನವು ಪುರಾತನ ಇತಿಹಾಸ ಹೊಂದಿದ್ದು, ಪ್ರತಿವರ್ಷ ನಡೆಯುವ ಜಾತ್ರೆಗೆ ಅಪಾರ ಸಂಖ್ಯೆಯಲ್ಲಿ ಭಕ್ತರು ಆಗಮಿಸುತ್ತಾರೆ. ಆದರೆ ಜಾತ್ರೆ ನಡೆಯುವ ಪ್ರದೇಶದಲ್ಲಿ ಕಟ್ಟಡಗಳು ಹಾಗೂ ಮನೆಗಳ ನಿರ್ಮಾಣ ಹೆಚ್ಚುತ್ತಿರುವುದರಿಂದ ಮುಂದಿನ ದಿನಗಳಲ್ಲಿ ಜಾಗದ ಕೊರತೆ ಎದುರಾಗುವ ಸಾಧ್ಯತೆಯಿದೆ ಎಂದು ಆತಂಕ ವ್ಯಕ್ತಪಡಿಸಿದರು.

ದೇವಸ್ಥಾನದ ಜಾತ್ರಾ ಸ್ಥಳವನ್ನು ಸಂರಕ್ಷಿಸುವ ಜವಾಬ್ದಾರಿ ಭಕ್ತರು ಹಾಗೂ ಗ್ರಾಮಸ್ಥರ ಮೇಲಿದೆ. ಅಗತ್ಯವಿದ್ದಲ್ಲಿ ಪೂಜಾರಿಗಳಿಗೆ ಪರ್ಯಾಯ ವ್ಯವಸ್ಥೆ ಕಲ್ಪಿಸಿ, ಜಾತ್ರೆ ಹಾಗೂ ಸಾಮೂಹಿಕ ವಿವಾಹಗಳಂತಹ ಧಾರ್ಮಿಕ ಕಾರ್ಯಕ್ರಮಗಳಿಗೆ ಯಾವುದೇ ಅಡಚಣೆಯಾಗದಂತೆ ಕ್ರಮ ಕೈಗೊಳ್ಳಬೇಕು ಎಂದು ಸಲಹೆ ನೀಡಿದರು.

ಇದೇ ಸಂದರ್ಭದಲ್ಲಿ ಜಗದ್ಗುರು ಜಯಶಾಂತೇಶ್ವರ ಸ್ವಾಮಿಗಳು ನವದಂಪತಿಗಳಿಗೆ ಆಶೀರ್ವಚನ ನೀಡಿದರು. ಗಿರಿಯಪ್ಪ ಪೂಜಾರಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಮಂದಕಲ್ ಮಠದ ಬಸವರಾಜ ರಾಜಗುರುಗಳು, ಮುಂಡರಗಿ ಶಿವಪ್ರಸಾದ ತಾತನವರು, ಗ್ರಾಮ ಪಂಚಾಯಿತಿ ಅಧ್ಯಕ್ಷೆ ಹನುಮಂತಿ ರಾಂಪಾಳಿ, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ವೀರಣ್ಣ ಪಾಣಿ, ಬಸವರಾಜ ಪಂಪಾಪತಿ, ಅಂಗನವಾಡಿ ಮೇಲ್ವಿಚಾರಕಿ ಶಾಂತಬಾಯಿ, ಅಭಿವೃದ್ಧಿ ಅಧಿಕಾರಿ ಲಕ್ಷ್ಮೀ ಅಷ್ಟಗಿ, ಸಿಪಿಐ ಪುಂಡಲೀಕ, ಆರ್‌ಡಿಸಿಸಿ ಬ್ಯಾಂಕ್ ನಿರ್ದೇಶಕ ರಾಜಶೇಖರ ನಾಯಕ, ಮಾಜಿ ಜಿಲ್ಲಾ ಪಂಚಾಯಿತಿ ಸದಸ್ಯ ಮಹಾದೇವಪ್ಪ ಪಾಟೀಲ್, ತಾಲೂಕು ವೈದ್ಯಾಧಿಕಾರಿ ಡಾ. ಆರ್.ಎಸ್. ಹುಲಿಮನಿಗೌಡ, ತಿಮ್ಮಣ್ಣ ನಾಯಕ, ದಿವಾನ್ ಬಸವರಾಜ, ರಾಮುಲು ಗಲಗ, ಅನಂತರಾಜ ನಾಯಕ, ಗೋವಿಂದ ಸೇವಾ ಸಮಿತಿಯ ಗೋವಿಂದರಾಜ್ ತಿಂಪೂರು, ಮುದುರಂಗಪ್ಪ ಕ್ಯಾದಿಗೇರಾ, ವೆಂಕೋಬ ಪೂಜಾರಿ, ಸಿದ್ದಪ್ಪ ಗುಮೇದಾರ, ಚಂದ್ರಕಾಂತ ಚಿಕ್ಕಲ್, ವೇಣುಗೋಪಾಲ ಗೌಡ, ಅಮರೇಶ ಪಾಟೀಲ್, ಬಸನಗೌಡ ದೇಸಾಯಿ, ತಿಮ್ಮರೆಡ್ಡಿ, ಚಂದಪ್ಪ ಬುದ್ದಿನ್ನಿ, ಯಂಕಪ್ಪ ಮುರಾಳ ಸೇರಿದಂತೆ ಅನೇಕ ಗಣ್ಯರು, ಸಮಾಜದ ಮುಖಂಡರು ಹಾಗೂ ಭಕ್ತರು ಉಪಸ್ಥಿತರಿದ್ದರು.

ಹನುಮಗೌಡ ಚಿಕ್ಕಲ್ ಸ್ವಾಗತಿಸಿದರು. ನಿವೃತ್ತ ಶಿಕ್ಷಕ ಶಿವಪುತ್ರಪ್ಪ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

ಸಮಾಜ ಸೇವೆಯಿಂದ ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನ ಸಾಧ್ಯ: ನಿವೃತ್ತ ಪ್ರಾಚಾರ್ಯ ಬೂದೆಪ್ಪ



ರಾಯಚೂರು, ಅ.29: ವಿದ್ಯಾರ್ಥಿಗಳು ಪಠ್ಯ ಶಿಕ್ಷಣದ ಜತೆಗೆ ಸಮಾಜ ಸೇವೆ, ಸ್ವಚ್ಛತೆ, ಪರಿಸರ ಸಂರಕ್ಷಣೆ ಹಾಗೂ ಸಾಮಾಜಿಕ ಜವಾಬ್ದಾರಿಗಳ ಬಗ್ಗೆ ಅರಿವು ಬೆಳೆಸಿಕೊಳ್ಳಬೇಕು. ಸಮಾಜಮುಖಿ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವುದರಿಂದ ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನ ಸಾಧ್ಯವಾಗುತ್ತದೆ ಎಂದು ನಿವೃತ್ತ ಪ್ರಾಚಾರ್ಯ ಬೂದೆಪ್ಪ ಹೇಳಿದರು.

ನಗರದ ಬಹೇರೂನ್ ಖಿಲ್ಲಾ ಪ್ರದೇಶದಲ್ಲಿ ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ವ್ಯಾಪ್ತಿಯ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ವತಿಯಿಂದ 2026-27ನೇ ಸಾಲಿನ ರಾಷ್ಟ್ರೀಯ ಸೇವಾ ಯೋಜನೆಯ (ಎನ್‌ಎಸ್‌ಎಸ್) ವಾರ್ಷಿಕ ವಿಶೇಷ ಶಿಬಿರದ ಉದ್ಘಾಟನಾ ಸಮಾರಂಭದಲ್ಲಿ ಅವರು ಮಾತನಾಡಿದರು.

ವಿದ್ಯಾರ್ಥಿ ಜೀವನವು ಕೇವಲ ಪರೀಕ್ಷೆಗಳಲ್ಲಿ ಉತ್ತಮ ಅಂಕಗಳನ್ನು ಗಳಿಸುವುದಕ್ಕೆ ಸೀಮಿತವಾಗಬಾರದು. ಸಮಾಜದ ಸಮಸ್ಯೆಗಳನ್ನು ಅರಿತು ಅವುಗಳ ಪರಿಹಾರಕ್ಕೆ ಕೈಜೋಡಿಸುವ ಮನೋಭಾವ ಬೆಳೆಸಿಕೊಳ್ಳಬೇಕು. ಸೇವಾ ಚಟುವಟಿಕೆಗಳು ವಿದ್ಯಾರ್ಥಿಗಳಲ್ಲಿ ಮಾನವೀಯ ಮೌಲ್ಯಗಳು, ಸಹಕಾರ ಮನೋಭಾವ ಹಾಗೂ ಸಾಮಾಜಿಕ ಕಳಕಳಿಯನ್ನು ಮೂಡಿಸುತ್ತವೆ ಎಂದು ತಿಳಿಸಿದರು.

ವಿಶೇಷವಾಗಿ ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಸ್ವಚ್ಛತೆ, ಪರಿಸರ ಸಂರಕ್ಷಣೆ ಮತ್ತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವಂತಹ ಕಾರ್ಯಗಳಲ್ಲಿ ವಿದ್ಯಾರ್ಥಿಗಳು ತೊಡಗಿಸಿಕೊಳ್ಳಬೇಕು. ರಾಷ್ಟ್ರೀಯ ಸೇವಾ ಯೋಜನೆಯಂತಹ ಶಿಬಿರಗಳು ಯುವಜನರನ್ನು ಜವಾಬ್ದಾರಿಯುತ ನಾಗರಿಕರನ್ನಾಗಿ ರೂಪಿಸಲು ಸಹಕಾರಿಯಾಗುತ್ತವೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲ ಡಾ. ರವೀಂದ್ರ ಎಸ್. ಬಂಡಿ ಮಾತನಾಡಿ, ರಾಷ್ಟ್ರೀಯ ಸೇವಾ ಯೋಜನೆಯು ವಿದ್ಯಾರ್ಥಿಗಳಲ್ಲಿ ಶಿಸ್ತು, ನಾಯಕತ್ವ ಗುಣ, ಸೇವಾ ಮನೋಭಾವ ಹಾಗೂ ಭಾವೈಕ್ಯತೆಯನ್ನು ಬೆಳೆಸುವ ಪ್ರಮುಖ ವೇದಿಕೆಯಾಗಿದೆ. ಶಿಬಿರದಲ್ಲಿ ಪಾಲ್ಗೊಳ್ಳುವ ವಿದ್ಯಾರ್ಥಿಗಳು ತಂಡವಾಗಿ ಕಾರ್ಯನಿರ್ವಹಿಸುವುದನ್ನು ಕಲಿಯುವುದರ ಜತೆಗೆ ಸಮಾಜದ ವಿವಿಧ ವರ್ಗಗಳ ಜನರೊಂದಿಗೆ ಬೆರೆಯುವ ಅವಕಾಶ ಪಡೆಯುತ್ತಾರೆ ಎಂದು ಹೇಳಿದರು.

ಶಿಕ್ಷಣದೊಂದಿಗೆ ಸಾಮಾಜಿಕ ಸೇವೆಯಲ್ಲಿ ತೊಡಗಿಸಿಕೊಳ್ಳುವುದರಿಂದ ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ ಮತ್ತು ಜವಾಬ್ದಾರಿಯ ಪ್ರಜ್ಞೆ ಹೆಚ್ಚುತ್ತದೆ. ಶಿಬಿರದ ಅವಧಿಯಲ್ಲಿ ನಡೆಯುವ ಚಟುವಟಿಕೆಗಳಲ್ಲಿ ಸ್ವಯಂಸೇವಕರು ಉತ್ಸಾಹದಿಂದ ಪಾಲ್ಗೊಂಡು ಅದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು.

ರಾಷ್ಟ್ರೀಯ ಸೇವಾ ಯೋಜನೆಯ ಕಾರ್ಯಕ್ರಮಾಧಿಕಾರಿ ಮಹಿಬೂಬ ಸಾಬ್ ಪ್ರಾಸ್ತಾವಿಕವಾಗಿ ಮಾತನಾಡಿ, ವಾರ್ಷಿಕ ವಿಶೇಷ ಶಿಬಿರದ ಉದ್ದೇಶ, ಕಾರ್ಯಚಟುವಟಿಕೆಗಳು ಹಾಗೂ ವಿದ್ಯಾರ್ಥಿಗಳ ಸಾಮಾಜಿಕ ಜವಾಬ್ದಾರಿಗಳ ಕುರಿತು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಉಪನ್ಯಾಸಕರಾದ ಗೋವರ್ಧನ ರೆಡ್ಡಿ, ರೂತ್ ನಳಿನಿ, ಪದ್ಮಾವತಿ ಹಾಗೂ ರಾಷ್ಟ್ರೀಯ ಸೇವಾ ಯೋಜನೆಯ ಸ್ವಯಂಸೇವಕರು ಉಪಸ್ಥಿತರಿದ್ದರು.

ಉಪನ್ಯಾಸಕ ಮಹಮ್ಮದ್ ಖಾಜಾ ಸ್ವಾಗತಿಸಿದರು. ಉಪನ್ಯಾಸಕ ವೆಂಕನಗೌಡ ವಂದಿಸಿದರು.

ಸ್ಲಂ ನಿವಾಸಿಗಳ ಹಕ್ಕುಗಳ ರಕ್ಷಣೆಗೆ ಸಂಘಟಿತ ಹೋರಾಟ ಅಗತ್ಯ: ಕೆ.ಪಿ. ಅನಿಲ್ ಕುಮಾರ್



ರಾಯಚೂರು: ಸ್ಲಂ ನಿವಾಸಿಗಳ ಮೂಲಭೂತ ಸೌಲಭ್ಯಗಳು, ವಸತಿ ಹಕ್ಕು ಹಾಗೂ ಸಾಮಾಜಿಕ ನ್ಯಾಯಕ್ಕಾಗಿ ಸಂಘಟಿತ ಹೋರಾಟ ನಡೆಸುವುದು ಅಗತ್ಯವಾಗಿದೆ. ರಾಯಚೂರು ಸ್ಲಂ ನಿವಾಸಿಗಳ ಕ್ರಿಯಾ ವೇದಿಕೆಯು ಕಳೆದ ಎರಡು ದಶಕಗಳಿಂದ ನಿರಂತರ ಜನಪರ ಹೋರಾಟಗಳ ಮೂಲಕ ಹಲವು ಸಾಧನೆಗಳನ್ನು ಮಾಡಿದೆ ಎಂದು ಕೆ.ಪಿ. ಅನಿಲ್ ಕುಮಾರ್ ಶ್ಲಾಘಿಸಿದರು.

ನಗರದ ಜೆಸಿ ಭವನದಲ್ಲಿ ಸ್ಲಂ ಜನಾಂದೋಲನ ಕರ್ನಾಟಕ, ರಾಯಚೂರು ಸ್ಲಂ ನಿವಾಸಿಗಳ ಕ್ರಿಯಾ ವೇದಿಕೆ ಹಾಗೂ ಸ್ಲಂ ನಿವಾಸಿಗಳ ಕಟ್ಟಡ ಮತ್ತು ಇತರೆ ನಿರ್ಮಾಣ ಸಂಘದ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ರಾಯಚೂರು ಜಿಲ್ಲಾ ಸಮಿತಿ ಮತ್ತು ಬೆಂಗಳೂರು ನಗರ ಸಮಿತಿಯ ಜಂಟಿ ಸಮಾಲೋಚನಾ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕಳೆದ 20 ವರ್ಷಗಳಿಂದ ರಾಯಚೂರು ಸ್ಲಂ ನಿವಾಸಿಗಳ ಕ್ರಿಯಾ ವೇದಿಕೆಯು ಸಭೆ, ಸಮಾವೇಶ ಹಾಗೂ ವಿವಿಧ ಜನಪರ ಹೋರಾಟಗಳನ್ನು ಸಂಘಟಿಸುವ ಮೂಲಕ ಸ್ಲಂ ನಿವಾಸಿಗಳ ಸಮಸ್ಯೆಗಳನ್ನು ಸರ್ಕಾರ ಮತ್ತು ಸಂಬಂಧಿಸಿದ ಅಧಿಕಾರಿಗಳ ಗಮನಕ್ಕೆ ತರುವ ಕೆಲಸ ಮಾಡುತ್ತಿದೆ. ನಿರಂತರ ಹೋರಾಟ ಮತ್ತು ಸಂಘಟಿತ ಪ್ರಯತ್ನಗಳಿಂದ ಹಲವು ಬೇಡಿಕೆಗಳನ್ನು ಈಡೇರಿಸಿಕೊಳ್ಳುವಲ್ಲಿ ಯಶಸ್ಸು ಸಾಧಿಸಿರುವುದು ಶ್ಲಾಘನೀಯ ಎಂದು ತಿಳಿಸಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಸಾವಿತ್ರಿಬಾಯಿ ಫುಲೆ ಮಹಿಳಾ ಸಂಘಟನೆಯ ರಾಜ್ಯ ಸಂಚಾಲಕಿ ಚಂದ್ರಮ್ಮ ಮಾತನಾಡಿ, ಸ್ಲಂ ನಿವಾಸಿಗಳ ಹಕ್ಕುಗಳ ರಕ್ಷಣೆ ಹಾಗೂ ಶೋಷಿತ ಸಮುದಾಯಗಳಿಗೆ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಕ್ರಿಯಾ ವೇದಿಕೆಯು ನಿರಂತರವಾಗಿ ಧ್ವನಿ ಎತ್ತುತ್ತಿದೆ. ಬಡವರು ಮತ್ತು ವಸತಿರಹಿತರ ಸಮಸ್ಯೆಗಳಿಗೆ ಸ್ಪಂದಿಸುತ್ತಿರುವ ಸಂಘಟನೆಯ ಕಾರ್ಯವೈಖರಿ ಮೆಚ್ಚುವಂತದ್ದು ಎಂದು ಹೇಳಿದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ರಾಯಚೂರು ಸ್ಲಂ ನಿವಾಸಿಗಳ ಕ್ರಿಯಾ ವೇದಿಕೆಯ ಅಧ್ಯಕ್ಷ ಜನಾರ್ಧನ್ ಹಳ್ಳಿಬೆಂಚಿ ಮಾತನಾಡಿ, ಸಂಘಟನೆಯಲ್ಲಿ ಯಾವುದೇ ರೀತಿಯ ತಾರತಮ್ಯಕ್ಕೆ ಅವಕಾಶ ನೀಡದೆ ಸಮಾನತೆ ಮತ್ತು ಪಾರದರ್ಶಕತೆಗೆ ಆದ್ಯತೆ ನೀಡಲಾಗಿದೆ. ಶಾಖಾ ಹಾಗೂ ಜಿಲ್ಲಾ ಮಟ್ಟದಲ್ಲಿ ನಿರಂತರ ಸಭೆಗಳನ್ನು ನಡೆಸುವುದು, ಸದಸ್ಯರೊಂದಿಗೆ ಸಮಾಲೋಚನೆ ಮಾಡುವುದು ಮತ್ತು ಸಂಬಂಧಿಸಿದ ಅಧಿಕಾರಿಗಳೊಂದಿಗೆ ಸಂವಾದ ನಡೆಸುವುದರಿಂದ ಸಂಘಟನೆಯನ್ನು ಪರಿಣಾಮಕಾರಿಯಾಗಿ ಮುನ್ನಡೆಸಲು ಸಾಧ್ಯವಾಗಿದೆ ಎಂದು ತಿಳಿಸಿದರು.

ಸ್ಲಂ ನಿವಾಸಿಗಳ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಸಂಘಟನೆಯ ಎಲ್ಲ ಹಂತಗಳ ಪದಾಧಿಕಾರಿಗಳು ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಬೇಕು. ಜನರ ಬೇಡಿಕೆಗಳನ್ನು ಸರ್ಕಾರದ ಗಮನಕ್ಕೆ ತರುವುದರ ಜತೆಗೆ ಅವುಗಳ ಈಡೇರಿಕೆಗೆ ನಿರಂತರ ಪ್ರಯತ್ನ ನಡೆಸುವುದು ಮುಖ್ಯವಾಗಿದೆ ಎಂದು ಅಭಿಪ್ರಾಯಪಟ್ಟರು.

ಸಭೆಯಲ್ಲಿ ಬೆಂಗಳೂರು ನಗರ ಹಾಗೂ ರಾಯಚೂರು ಜಿಲ್ಲಾ ಸಮಿತಿಯ ಪದಾಧಿಕಾರಿಗಳು ಪರಸ್ಪರ ಪರಿಚಯಿಸಿಕೊಂಡು ಸಂಘಟನೆಯ ಕಾರ್ಯಚಟುವಟಿಕೆಗಳು, ಸ್ಲಂ ನಿವಾಸಿಗಳು ಎದುರಿಸುತ್ತಿರುವ ಸಮಸ್ಯೆಗಳು ಹಾಗೂ ಮುಂದಿನ ಹೋರಾಟಗಳ ಕುರಿತು ಸಮಾಲೋಚನೆ ನಡೆಸಿದರು.

ಸಭೆಯ ಬಳಿಕ ಉಭಯ ಸಮಿತಿಗಳ ಪದಾಧಿಕಾರಿಗಳು ನಗರದ ಪದ್ಮಾವತಿ ಕಾಲೋನಿ, ಪೋತಗಲ್ ಸ್ಲಂ, ಅಮರಾವತಿ ಕಾಲೋನಿ, ಜ್ಯೋತಿ ಕಾಲೋನಿ ಸೇರಿದಂತೆ ವಿವಿಧ ಕೊಳೆಗೇರಿ ಪ್ರದೇಶಗಳಿಗೆ ಭೇಟಿ ನೀಡಿ ಸ್ಥಳೀಯ ಪರಿಸ್ಥಿತಿಯನ್ನು ವೀಕ್ಷಿಸಿದರು. ಇದೇ ಸಂದರ್ಭದಲ್ಲಿ ನಿವೇಶನರಹಿತರಿಗೆ ಮಂಜೂರಾಗಿರುವ ಭೂಮಿಯನ್ನು ಪರಿಶೀಲಿಸಿದರು.

ಈ ಸಂದರ್ಭದಲ್ಲಿ ಸ್ಲಂ ಜನಾಂದೋಲನ ಕರ್ನಾಟಕದ ಖಜಾಂಚಿ ತೇಜಸ್ ಕುಮಾರ್, ಬೆಂಗಳೂರು ನಗರ ಸಮಿತಿ ಅಧ್ಯಕ್ಷ ಮಂಜುಭಾಯಿ, ಯುವ ಘಟಕದ ಅಧ್ಯಕ್ಷ ಹನುಮಂತು ಕಟ್ಟಿಮನಿ, ಬಸವರಾಜ ಹೊಸೂರು, ನೂರ್‌ಜಹಾನ್, ಮಹೇಶ್, ಶರಣು ಬಸವ, ರಾಜಶೇಖರ್ ಯಾಕ್ಲಾಸಪುರ, ಡೊಕ್ಕ ಜಂಬಣ್ಣ, ಜಂಬಣ್ಣ, ರಾಮಣ್ಣ, ಎಸ್. ನಾಗರಾಜ್, ನಿತಿನ್, ಪವನ್, ಅಂಜಿ, ಜಿಂದು, ತಾಯಪ್ಪ, ಶಂಕ್ರಮ್ಮ, ಪುಷ್ಪ, ಶೈನಜ ಬೇಗಂ, ಚಂದ್ರು, ಪ್ರವೀಣ್, ಶೇಖ್ ಅರುಣ್ ಸೇರಿದಂತೆ ಬೆಂಗಳೂರು ಹಾಗೂ ರಾಯಚೂರು ಸಮಿತಿಗಳ ಪದಾಧಿಕಾರಿಗಳು ಮತ್ತು ಸದಸ್ಯರು ಉಪಸ್ಥಿತರಿದ್ದರು.

ಕೃಷಿ ವಿಶ್ವವಿದ್ಯಾಲಯದ ಪ್ರಭಾರ ಕುಲಪತಿಯಾಗಿ ಡಾ. ಗುರುರಾಜ ಸುಂಕದ ಅಧಿಕಾರ ಸ್ವೀಕಾರ



ರಾಯಚೂರು, ಅ.29: ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಪ್ರಭಾರ ಕುಲಪತಿಯಾಗಿ ಡಾ. ಗುರುರಾಜ ಸುಂಕದ ಅವರನ್ನು ನೇಮಕ ಮಾಡಲಾಗಿದ್ದು, ಅಕ್ಟೋಬರ್ 28ರಂದು ಅವರು ಅಧಿಕಾರ ಸ್ವೀಕರಿಸಿದರು.

ಕರ್ನಾಟಕದ ರಾಜ್ಯಪಾಲರಾದ ಡಾ. ಸುಧಾ ಯಾದವ್ ಅವರು ಡಾ. ಗುರುರಾಜ ಸುಂಕದ ಅವರನ್ನು ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಪ್ರಭಾರ ಕುಲಪತಿಯಾಗಿ ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ. ಈ ಆದೇಶದನ್ವಯ ಅವರು ವಿಶ್ವವಿದ್ಯಾಲಯದ ಪ್ರಭಾರ ಕುಲಪತಿಯಾಗಿ ಅಧಿಕಾರ ವಹಿಸಿಕೊಂಡಿದ್ದಾರೆ.

ಮೂಲತಃ ಕೊಪ್ಪಳ ಜಿಲ್ಲೆಯ ಕುಕನೂರು ತಾಲೂಕಿನ ಮಂಗಳೂರು ಗ್ರಾಮದವರಾದ ಡಾ. ಗುರುರಾಜ ಸುಂಕದ ಅವರು ರಾಯಚೂರು ಕೃಷಿ ಮಹಾವಿದ್ಯಾಲಯದ ಪ್ರಥಮ ಬ್ಯಾಚ್‌ನ ಬಿ.ಎಸ್ಸಿ. (ಕೃಷಿ) ವಿದ್ಯಾರ್ಥಿಯಾಗಿದ್ದರು. ತಾವು ವಿದ್ಯಾಭ್ಯಾಸ ಮಾಡಿದ ಸಂಸ್ಥೆಯಲ್ಲಿಯೇ ವಿವಿಧ ಶೈಕ್ಷಣಿಕ ಹಾಗೂ ಆಡಳಿತಾತ್ಮಕ ಹುದ್ದೆಗಳನ್ನು ನಿರ್ವಹಿಸಿ ಇದೀಗ ಪ್ರಭಾರ ಕುಲಪತಿ ಹುದ್ದೆಗೇರಿರುವುದು ವಿಶೇಷವಾಗಿದೆ.

ಸುಮಾರು 28 ವರ್ಷಗಳ ಸುದೀರ್ಘ ಸೇವಾನುಭವ ಹೊಂದಿರುವ ಅವರು, ವಿಶ್ವವಿದ್ಯಾಲಯದ ಸಸ್ಯರೋಗಶಾಸ್ತ್ರ ವಿಭಾಗದ ಪ್ರಾಧ್ಯಾಪಕರಾಗಿ, ವಿಭಾಗದ ಮುಖ್ಯಸ್ಥರಾಗಿ, ಸಹ ಸಂಶೋಧನಾ ನಿರ್ದೇಶಕರಾಗಿ, ಸ್ನಾತಕೋತ್ತರ ವಿಭಾಗದ ಡೀನ್ ಆಗಿ ಹಾಗೂ ಕುಲಸಚಿವರಾಗಿ ಕಾರ್ಯನಿರ್ವಹಿಸಿದ್ದಾರೆ. ಪ್ರಸ್ತುತ ಶಿಕ್ಷಣ ನಿರ್ದೇಶಕರಾಗಿ ಸೇವೆ ಸಲ್ಲಿಸುತ್ತಿದ್ದ ಅವರು ಪ್ರಭಾರ ಕುಲಪತಿಯಾಗಿ ಹೊಸ ಜವಾಬ್ದಾರಿ ವಹಿಸಿಕೊಂಡಿದ್ದಾರೆ.

ಶೈಕ್ಷಣಿಕ ಮತ್ತು ಆಡಳಿತಾತ್ಮಕ ಜವಾಬ್ದಾರಿಗಳ ಜತೆಗೆ ವಿಶ್ವವಿದ್ಯಾಲಯದ ಹಳೆಯ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷರಾಗಿಯೂ ಕಾರ್ಯನಿರ್ವಹಿಸಿರುವ ಅವರು, ವಿಶ್ವವಿದ್ಯಾಲಯದ ಆಡಳಿತ ಮಂಡಳಿಯ ಗೌರವಾನ್ವಿತ ಸದಸ್ಯರಾಗಿಯೂ ಸೇವೆ ಸಲ್ಲಿಸಿದ್ದಾರೆ.

ಕೃಷಿ ಶಿಕ್ಷಣ, ಸಂಶೋಧನೆ ಹಾಗೂ ವಿಶ್ವವಿದ್ಯಾಲಯದ ಆಡಳಿತದಲ್ಲಿ ಹೊಂದಿರುವ ದೀರ್ಘ ಅನುಭವವು ನೂತನ ಜವಾಬ್ದಾರಿಯನ್ನು ಸಮರ್ಥವಾಗಿ ನಿರ್ವಹಿಸಲು ಸಹಕಾರಿಯಾಗಲಿದೆ ಎಂಬ ನಿರೀಕ್ಷೆ ವ್ಯಕ್ತವಾಗಿದೆ.

ವಿಶೇಷವಾಗಿ ಕಲ್ಯಾಣ ಕರ್ನಾಟಕ ಭಾಗದ ರೈತರ ಸಮಸ್ಯೆಗಳಿಗೆ ಸ್ಪಂದಿಸುವ ಕೃಷಿ ಸಂಶೋಧನೆಗಳಿಗೆ ಆದ್ಯತೆ ನೀಡುವುದು, ಕೃಷಿ ತಂತ್ರಜ್ಞಾನವನ್ನು ರೈತರಿಗೆ ತಲುಪಿಸುವುದು ಹಾಗೂ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ಮತ್ತು ಸಂಶೋಧನಾ ಅವಕಾಶಗಳನ್ನು ಒದಗಿಸುವ ನಿಟ್ಟಿನಲ್ಲಿ ಅವರ ಅನುಭವ ಪ್ರಯೋಜನಕಾರಿಯಾಗಲಿದೆ ಎಂಬ ಆಶಯವನ್ನು ಈ ಭಾಗದ ಜನತೆ ವ್ಯಕ್ತಪಡಿಸಿದ್ದಾರೆ.

ಅ.31ರಿಂದ ರಾಜ್ಯಮಟ್ಟದ ಮುಕ್ತ ಕಬಡ್ಡಿ ಪಂದ್ಯಾವಳಿ: ವಿಜೇತರಿಗೆ ನಗದು ಬಹುಮಾನ



ರಾಯಚೂರು: ಗ್ರಾಮೀಣ ಕ್ರೀಡೆಯಾದ ಕಬಡ್ಡಿಗೆ ಉತ್ತೇಜನ ನೀಡುವ ಉದ್ದೇಶದಿಂದ ಜಯ ಕರ್ನಾಟಕ ಸಂಘಟನೆಯ ವತಿಯಿಂದ ತಾಲೂಕಿನ ದೇವಸೂಗೂರಿನ ಶ್ರೀ ಸೂಗೂರೇಶ್ವರ ಸ್ವಾಮಿ ದೇವಸ್ಥಾನದ ಆವರಣದಲ್ಲಿ ಅಕ್ಟೋಬರ್ 31 ಮತ್ತು ನವೆಂಬರ್ 1ರಂದು ಎರಡು ದಿನಗಳ ರಾಜ್ಯಮಟ್ಟದ ಮುಕ್ತ ಕಬಡ್ಡಿ ಪಂದ್ಯಾವಳಿ ಆಯೋಜಿಸಲಾಗಿದೆ ಎಂದು ಸಂಘಟನೆಯ ಜಿಲ್ಲಾಧ್ಯಕ್ಷ ಎಸ್. ಶಿವಕುಮಾರ್ ಯಾದವ್ ತಿಳಿಸಿದ್ದಾರೆ.

ಈ ಕುರಿತು ಮಾಹಿತಿ ನೀಡಿರುವ ಅವರು, ಯುವಜನರಲ್ಲಿ ಕ್ರೀಡಾಸಕ್ತಿ ಬೆಳೆಸುವುದು, ಗ್ರಾಮೀಣ ಪ್ರತಿಭೆಗಳಿಗೆ ಸೂಕ್ತ ವೇದಿಕೆ ಕಲ್ಪಿಸುವುದು ಹಾಗೂ ಕಬಡ್ಡಿ ಕ್ರೀಡೆಯನ್ನು ಪ್ರೋತ್ಸಾಹಿಸುವ ಉದ್ದೇಶದಿಂದ ಪಂದ್ಯಾವಳಿ ಹಮ್ಮಿಕೊಳ್ಳಲಾಗಿದೆ. ರಾಜ್ಯದ ವಿವಿಧ ಜಿಲ್ಲೆಗಳಿಂದ ಕಬಡ್ಡಿ ತಂಡಗಳು ಭಾಗವಹಿಸುವ ನಿರೀಕ್ಷೆಯಿದೆ ಎಂದು ತಿಳಿಸಿದ್ದಾರೆ.

ಪಂದ್ಯಾವಳಿಯಲ್ಲಿ ಪ್ರಥಮ ಸ್ಥಾನ ಪಡೆಯುವ ತಂಡಕ್ಕೆ ₹30 ಸಾವಿರ ನಗದು ಬಹುಮಾನ ಹಾಗೂ ಆಕರ್ಷಕ ಟ್ರೋಫಿ, ದ್ವಿತೀಯ ಸ್ಥಾನಕ್ಕೆ ₹20 ಸಾವಿರ ಮತ್ತು ಟ್ರೋಫಿ ಹಾಗೂ ತೃತೀಯ ಸ್ಥಾನಕ್ಕೆ ₹10 ಸಾವಿರ ನಗದು ಬಹುಮಾನ ಮತ್ತು ಟ್ರೋಫಿ ನೀಡಿ ಗೌರವಿಸಲಾಗುವುದು.

ಇದಲ್ಲದೆ ವೈಯಕ್ತಿಕ ಸಾಧನೆಗಳನ್ನು ಗುರುತಿಸುವ ನಿಟ್ಟಿನಲ್ಲಿ ಉತ್ತಮ ಕ್ಯಾಚರ್, ಉತ್ತಮ ರೈಡರ್ ಹಾಗೂ ಉತ್ತಮ ಆಟಗಾರರಿಗೆ ತಲಾ ₹1,000 ನಗದು ಬಹುಮಾನ ನೀಡಲಾಗುವುದು ಎಂದು ಆಯೋಜಕರು ತಿಳಿಸಿದ್ದಾರೆ.

ಪಂದ್ಯಾವಳಿಯು ಯಾವುದೇ ತೂಕದ ಮಿತಿಯಿಲ್ಲದ ಮುಕ್ತ ವಿಭಾಗದಲ್ಲಿ ನಡೆಯಲಿದ್ದು, ಆಸಕ್ತ ತಂಡಗಳಿಗೆ ಭಾಗವಹಿಸಲು ಅವಕಾಶ ಕಲ್ಪಿಸಲಾಗಿದೆ. ಸ್ಪರ್ಧೆಯಲ್ಲಿ ಭಾಗವಹಿಸುವ ಪ್ರತಿಯೊಬ್ಬ ಕ್ರೀಡಾಪಟು ಕಡ್ಡಾಯವಾಗಿ ಆಧಾರ್ ಕಾರ್ಡ್ ತರಬೇಕು. ಪಂದ್ಯಗಳ ಸಂದರ್ಭದಲ್ಲಿ ನಿರ್ಣಾಯಕರ ತೀರ್ಮಾನವೇ ಅಂತಿಮವಾಗಿರುತ್ತದೆ. ತಂಡಗಳ ನೋಂದಣಿಗೆ ನಿಗದಿತ ಶುಲ್ಕ ಪಾವತಿಸಬೇಕಾಗುತ್ತದೆ ಎಂದು ತಿಳಿಸಿದ್ದಾರೆ.

ಕಬಡ್ಡಿ ಕ್ರೀಡೆಯು ದೈಹಿಕ ಸಾಮರ್ಥ್ಯ, ಚುರುಕುತನ, ಶಿಸ್ತು, ಆತ್ಮವಿಶ್ವಾಸ ಹಾಗೂ ತಂಡದ ಮನೋಭಾವವನ್ನು ಬೆಳೆಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಗ್ರಾಮೀಣ ಪ್ರದೇಶಗಳ ಪ್ರತಿಭಾವಂತ ಕ್ರೀಡಾಪಟುಗಳಿಗೆ ತಮ್ಮ ಸಾಮರ್ಥ್ಯ ಪ್ರದರ್ಶಿಸಲು ಇಂತಹ ಪಂದ್ಯಾವಳಿಗಳು ಉತ್ತಮ ಅವಕಾಶ ಒದಗಿಸುತ್ತವೆ ಎಂದು ಶಿವಕುಮಾರ್ ಯಾದವ್ ಅಭಿಪ್ರಾಯಪಟ್ಟಿದ್ದಾರೆ.

ದೇವಸೂಗೂರು ಸೇರಿದಂತೆ ರಾಯಚೂರು ಜಿಲ್ಲೆಯ ವಿವಿಧ ಭಾಗಗಳ ಕ್ರೀಡಾಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಆಟಗಾರರನ್ನು ಪ್ರೋತ್ಸಾಹಿಸುವ ಮೂಲಕ ಪಂದ್ಯಾವಳಿಯನ್ನು ಯಶಸ್ವಿಗೊಳಿಸಬೇಕು ಎಂದು ಜಯ ಕರ್ನಾಟಕ ಸಂಘಟನೆಯ ಪದಾಧಿಕಾರಿಗಳು ಮನವಿ ಮಾಡಿದ್ದಾರೆ.

ಪಂದ್ಯಾವಳಿಯಲ್ಲಿ ಭಾಗವಹಿಸಲು ಇಚ್ಛಿಸುವ ತಂಡಗಳು ನೋಂದಣಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಶಿಖರೇಶ (9880707058), ವೆಂಕಟೇಶ ಯಾದವ್ (9880005081, 9606675584), ಸುರೇಶ ಡಿ. (9902160482), ರಾಜು (9945039136) ಹಾಗೂ ಪ್ರಕಾಶ ಜಿ. (9900909892) ಅವರನ್ನು ಸಂಪರ್ಕಿಸಬಹುದು ಎಂದು ಆಯೋಜಕರು ತಿಳಿಸಿದ್ದಾರೆ.

ಕನ್ನಡ ರಾಜ್ಯೋತ್ಸವ ಮೆರವಣಿಗೆಯಲ್ಲಿ ಎಲ್ಲ ಇಲಾಖೆಗಳ ಅಧಿಕಾರಿಗಳ ಭಾಗವಹಿಸುವಿಕೆ ಕಡ್ಡಾಯ: ಎಸಿ ನಾಗೇಂದ್ರಬಾಬು ಕುಮಾರ



ಲಿಂಗಸುಗೂರು: ನವೆಂಬರ್ 1ರಂದು ನಡೆಯಲಿರುವ ಕನ್ನಡ ರಾಜ್ಯೋತ್ಸವವನ್ನು ಸಂಭ್ರಮ, ಸಡಗರ ಹಾಗೂ ಅರ್ಥಪೂರ್ಣವಾಗಿ ಆಚರಿಸಲು ಎಲ್ಲ ಇಲಾಖೆಗಳ ಅಧಿಕಾರಿಗಳು ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಬೇಕು. ರಾಜ್ಯೋತ್ಸವ ಮೆರವಣಿಗೆ ಹಾಗೂ ಅಧಿಕೃತ ಕಾರ್ಯಕ್ರಮಗಳಲ್ಲಿ ಎಲ್ಲ ಇಲಾಖೆಗಳ ಅಧಿಕಾರಿಗಳು ಕಡ್ಡಾಯವಾಗಿ ಭಾಗವಹಿಸಬೇಕು ಎಂದು ಸಹಾಯಕ ಆಯುಕ್ತ ನಾಗೇಂದ್ರಬಾಬು ಕುಮಾರ ಸೂಚಿಸಿದರು.

ಪಟ್ಟಣದ ಸಹಾಯಕ ಆಯುಕ್ತರ ಕಚೇರಿ ಸಭಾಂಗಣದಲ್ಲಿ ಕನ್ನಡ ರಾಜ್ಯೋತ್ಸವ ಆಚರಣೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಂಗಳವಾರ ಮಾತನಾಡಿದ ಅವರು, ಕನ್ನಡ ನಾಡು, ನುಡಿ ಹಾಗೂ ಸಂಸ್ಕೃತಿಯ ಮಹತ್ವವನ್ನು ಸಾರುವ ರಾಜ್ಯೋತ್ಸವ ಕಾರ್ಯಕ್ರಮವನ್ನು ಎಲ್ಲರ ಸಹಕಾರದೊಂದಿಗೆ ಯಶಸ್ವಿಯಾಗಿ ಆಯೋಜಿಸಬೇಕು ಎಂದು ತಿಳಿಸಿದರು.

ನವೆಂಬರ್ 1ರಂದು ಬೆಳಿಗ್ಗೆ 8 ಗಂಟೆಗೆ ಸರ್ಕಾರಿ ಪದವಿ ಪೂರ್ವ ಕಾಲೇಜು ಮೈದಾನದಲ್ಲಿ ಕನ್ನಡ ತಾಯಿ ಭುವನೇಶ್ವರಿ ದೇವಿಯ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ರಾಜ್ಯೋತ್ಸವ ಮೆರವಣಿಗೆಗೆ ಚಾಲನೆ ನೀಡಲಾಗುವುದು. ಬಳಿಕ ಬೆಳಿಗ್ಗೆ 9 ಗಂಟೆಗೆ ತಾಲೂಕು ಕ್ರೀಡಾಂಗಣದಲ್ಲಿ ರಾಷ್ಟ್ರ ಧ್ವಜಾರೋಹಣ ನೆರವೇರಿಸಿ ಅಧಿಕೃತ ರಾಜ್ಯೋತ್ಸವ ಕಾರ್ಯಕ್ರಮ ನಡೆಸಲಾಗುವುದು ಎಂದು ವಿವರಿಸಿದರು.

ರಾಜ್ಯೋತ್ಸವ ಮೆರವಣಿಗೆಯಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಕಡ್ಡಾಯವಾಗಿ ಭಾಗವಹಿಸಬೇಕು. ಕಾರ್ಯಕ್ರಮದ ಯಶಸ್ಸಿಗೆ ಸಂಬಂಧಿಸಿದ ಇಲಾಖೆಗಳು ಪರಸ್ಪರ ಸಮನ್ವಯ ಸಾಧಿಸಿ ತಮಗೆ ವಹಿಸಿರುವ ಜವಾಬ್ದಾರಿಗಳನ್ನು ಸಮರ್ಪಕವಾಗಿ ನಿರ್ವಹಿಸಬೇಕು ಎಂದು ಸೂಚಿಸಿದರು.

ಕನ್ನಡ ಭಾಷೆ, ಸಾಹಿತ್ಯ, ಕಲೆ ಹಾಗೂ ಸಂಸ್ಕೃತಿಯ ಬೆಳವಣಿಗೆಗೆ ಕೊಡುಗೆ ನೀಡಿರುವ ಬರಹಗಾರರು, ಸಾಹಿತಿಗಳು ಮತ್ತು ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರನ್ನು ರಾಜ್ಯೋತ್ಸವ ಸಮಾರಂಭದಲ್ಲಿ ಸನ್ಮಾನಿಸಲಾಗುವುದು. ಕನ್ನಡಪರ ಸಂಘಟನೆಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ ತಹಶೀಲ್ದಾರ್ ಸತ್ಯಮ್ಮ, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಉಮೇಶ, ಕನ್ನಡಪರ ಸಂಘಟನೆಗಳ ಮುಖಂಡರಾದ ಜಿಲಾನಿ ಪಾಷಾ, ಮಾದೇಶ ಸರ್ಜಾಪುರ, ಬಾಲನಗೌಡ ಪಾಟೀಲ್, ಅಬಕಾರಿ ಇನ್‌ಸ್ಪೆಕ್ಟರ್ ಲಕ್ಷ್ಮೀದೇವಿ, ಎಪಿಎಂಸಿ ಕಾರ್ಯದರ್ಶಿ ನೀಲಪ್ಪ ಶೆಟ್ಟಿ, ಪುರಸಭೆ ವ್ಯವಸ್ಥಾಪಕ ಹನುಮಂತರಾಯ ನಾಯಕ, ಪಶುವೈದ್ಯಾಧಿಕಾರಿ ಅಮರೇಗೌಡ, ದೈಹಿಕ ಶಿಕ್ಷಣಾಧಿಕಾರಿ ಮಲ್ಲಿಕಾರ್ಜುನ, ಕಂದಾಯ ನಿರೀಕ್ಷಕ ರಾಮಕೃಷ್ಣ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಕನ್ನಡಪರ ಸಂಘಟನೆಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

ಪ್ರಾಯೋಗಿಕ ಜ್ಞಾನಕ್ಕೆ ಹೆಚ್ಚಿನ ಆದ್ಯತೆ ನೀಡಿ: ಅಪರ ಜಿಲ್ಲಾಧಿಕಾರಿ ಶಿವಾನಂದ



ರಾಯಚೂರು, ಅ.29: ರಾಯಚೂರು ಜಿಲ್ಲೆಯು ಕೃಷಿ ಮತ್ತು ಕೈಗಾರಿಕಾ ಕ್ಷೇತ್ರಗಳಲ್ಲಿ ತನ್ನದೇ ಆದ ವಿಶಿಷ್ಟ ಸ್ಥಾನ ಹೊಂದಿದ್ದು, ವಿದ್ಯಾರ್ಥಿಗಳಿಗೆ ಕೇವಲ ಸೈದ್ಧಾಂತಿಕ ಶಿಕ್ಷಣ ನೀಡುವುದಕ್ಕಿಂತ ಪ್ರಾಯೋಗಿಕ ಜ್ಞಾನ ಮತ್ತು ಕೌಶಲ್ಯಾಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಬೇಕು. ಆ ಮೂಲಕ ಯುವಜನರನ್ನು ಉದ್ಯೋಗ ಪಡೆಯುವವರಾಗಿ ಮಾತ್ರವಲ್ಲದೆ ಉದ್ಯೋಗ ಸೃಷ್ಟಿಸುವವರನ್ನಾಗಿಯೂ ರೂಪಿಸಲು ಶಿಕ್ಷಣ ಸಂಸ್ಥೆಗಳು ಹಾಗೂ ಕೈಗಾರಿಕೆಗಳು ಮುಂದಾಗಬೇಕು ಎಂದು ಅಪರ ಜಿಲ್ಲಾಧಿಕಾರಿ ಶಿವಾನಂದ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಜಿಲ್ಲಾಡಳಿತ, ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ, ಜಿಲ್ಲಾ ಕೌಶಲ್ಯಾಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಕೈಗಾರಿಕಾ ಕೇಂದ್ರದ ಸಂಯುಕ್ತಾಶ್ರಯದಲ್ಲಿ ಜಿಲ್ಲೆಯ ವಿವಿಧ ಕೈಗಾರಿಕೆಗಳು, ಕಂಪನಿಗಳು ಹಾಗೂ ಶಿಶಿಕ್ಷು ತರಬೇತಿ ನೀಡುವ ಉದ್ಯಮಗಳ ಪ್ರತಿನಿಧಿಗಳಿಗಾಗಿ ಆಯೋಜಿಸಿದ್ದ ಒಂದು ದಿನದ ತರಬೇತಿ ಮತ್ತು ಪ್ರೋತ್ಸಾಹ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕರ್ನಾಟಕದ ಒಟ್ಟು ಅಕ್ಕಿ ಉತ್ಪಾದನೆಯಲ್ಲಿ ಶೇ.37ರಷ್ಟು ಪಾಲು ರಾಯಚೂರು ಜಿಲ್ಲೆಯದ್ದಾಗಿದೆ. ಅಲ್ಲದೆ, ರಾಜ್ಯದ ಇತರ ಅಗತ್ಯ ಉತ್ಪನ್ನಗಳ ಪೂರೈಕೆಯಲ್ಲಿಯೂ ಜಿಲ್ಲೆಯು ಶೇ.10ರಿಂದ 20ರಷ್ಟು ಕೊಡುಗೆ ನೀಡುತ್ತಿದೆ. ಸಾರ್ವಜನಿಕ ಮತ್ತು ಖಾಸಗಿ ಕೈಗಾರಿಕೆಗಳ ಸಹಭಾಗಿತ್ವದಿಂದ ರಾಯಚೂರು ಜಿಲ್ಲೆ ವಿವಿಧ ಕ್ಷೇತ್ರಗಳಲ್ಲಿ ಸ್ವಾವಲಂಬನೆ ಸಾಧಿಸುವತ್ತ ಮುನ್ನಡೆಯುತ್ತಿದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಸ್ಥಳೀಯ ಕಾರ್ಮಿಕರು ಲಭ್ಯವಿದ್ದರೂ ಕೈಗಾರಿಕಾ ಕ್ಷೇತ್ರಕ್ಕೆ ಅಗತ್ಯವಿರುವ ನುರಿತ ಮಾನವ ಸಂಪನ್ಮೂಲದ ಕೊರತೆ ಎದುರಾಗುತ್ತಿದೆ. ಉದ್ಯೋಗಾವಕಾಶಗಳು ಲಭ್ಯವಿದ್ದರೂ ಸೂಕ್ತ ಕೌಶಲ್ಯದ ಅಭಾವದಿಂದ ಅನೇಕ ಯುವಜನರು ಉದ್ಯೋಗ ಪಡೆಯಲು ಸಾಧ್ಯವಾಗುತ್ತಿಲ್ಲ. ಈ ಅಂತರವನ್ನು ಕಡಿಮೆ ಮಾಡಲು ಶಿಕ್ಷಣ ಸಂಸ್ಥೆಗಳು ಮತ್ತು ಕೈಗಾರಿಕೆಗಳ ನಡುವೆ ಸಮನ್ವಯ ಅಗತ್ಯವಾಗಿದೆ ಎಂದು ಅಭಿಪ್ರಾಯಪಟ್ಟರು.

ಜಿಲ್ಲೆಯ ಕೈಗಾರಿಕಾ ತರಬೇತಿ ಸಂಸ್ಥೆಗಳಿಂದ (ಐಟಿಐ) ಪ್ರತಿವರ್ಷ ಹೊರಬರುವ ವಿದ್ಯಾರ್ಥಿಗಳಿಗೆ ಶಿಶಿಕ್ಷು ತರಬೇತಿ (ಅಪ್ರೆಂಟಿಸ್‌ಶಿಪ್) ಹಾಗೂ ಶಿಷ್ಯವೇತನ ಒದಗಿಸುವ ಮೂಲಕ ಅವರ ವೃತ್ತಿಪರ ಕೌಶಲ್ಯವನ್ನು ಹೆಚ್ಚಿಸಬೇಕು. ಕೈಗಾರಿಕೆಗಳಲ್ಲಿ ನೇರವಾಗಿ ಕೆಲಸ ಮಾಡುವ ಅನುಭವ ದೊರೆತಾಗ ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ ಹೆಚ್ಚುವುದರ ಜತೆಗೆ ಉದ್ಯೋಗಾವಕಾಶಗಳೂ ವಿಸ್ತರಣೆಯಾಗಲಿವೆ ಎಂದು ಹೇಳಿದರು.

ಬೆಂಗಳೂರಿನ ಫೆಡರೇಷನ್ ಆಫ್ ಕರ್ನಾಟಕ ಚೇಂಬರ್ಸ್ ಆಫ್ ಕಾಮರ್ಸ್ ಅಂಡ್ ಇಂಡಸ್ಟ್ರಿ (ಎಫ್‌ಕೆಸಿಸಿಐ) ನಿರ್ದೇಶಕ ತ್ರಿವಿಕ್ರಮ ಜೋಷಿ ಮಾತನಾಡಿ, ಕೇಂದ್ರ ಸರ್ಕಾರದ ರಾಷ್ಟ್ರೀಯ ಶಿಶಿಕ್ಷು ತರಬೇತಿ ಉತ್ತೇಜನ ಯೋಜನೆ (ಎನ್‌ಎಪಿಎಸ್) ಅಡಿಯಲ್ಲಿ ಯುವಜನರಿಗೆ ಉದ್ಯೋಗಾಧಾರಿತ ತರಬೇತಿ ನೀಡಲು ಆದ್ಯತೆ ನೀಡಲಾಗುತ್ತಿದೆ. ಈ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಜಿಲ್ಲಾ ಹಾಗೂ ರಾಜ್ಯಮಟ್ಟದ ವಿವಿಧ ಇಲಾಖೆಗಳ ನಡುವೆ ಸಮನ್ವಯ ಸಾಧಿಸಲಾಗುತ್ತಿದೆ ಎಂದು ತಿಳಿಸಿದರು.

ಐದನೇ ತರಗತಿಯಲ್ಲಿಯೇ ಶಿಕ್ಷಣ ಮೊಟಕುಗೊಳಿಸಿದವರಿಂದ ಹಿಡಿದು ಎಸ್‌ಎಸ್‌ಎಲ್‌ಸಿ, ಪಿಯುಸಿ, ಪದವಿ, ಡಿಪ್ಲೊಮಾ ಹಾಗೂ ಐಟಿಐ ಸೇರಿದಂತೆ ವಿವಿಧ ವಿದ್ಯಾರ್ಹತೆ ಹೊಂದಿರುವವರಿಗೆ ಅವರ ಅರ್ಹತೆಗೆ ಅನುಗುಣವಾಗಿ ಕೌಶಲ್ಯ ತರಬೇತಿ, ಪ್ರಮಾಣಪತ್ರ ಹಾಗೂ ಉದ್ಯೋಗಾವಕಾಶಗಳನ್ನು ಕಲ್ಪಿಸುವುದು ಯೋಜನೆಯ ಪ್ರಮುಖ ಉದ್ದೇಶವಾಗಿದೆ ಎಂದು ವಿವರಿಸಿದರು.

ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಸುಮಾರು 70 ಸಾವಿರಕ್ಕೂ ಹೆಚ್ಚು ಪದವಿ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ. ಇವರಿಗೆ ಕಾಲೇಜು ಹಂತದಲ್ಲಿಯೇ ಆರು ತಿಂಗಳ ವಿಶೇಷ ಕೌಶಲ್ಯ ತರಬೇತಿ ನೀಡಿ ಪ್ರಮಾಣಪತ್ರ ವಿತರಿಸಿದರೆ, ವಿವಿಧ ಕೈಗಾರಿಕೆಗಳಲ್ಲಿ ಉದ್ಯೋಗ ಪಡೆಯಲು ಅನುಕೂಲವಾಗಲಿದೆ. ಈ ನಿಟ್ಟಿನಲ್ಲಿ ಸರ್ಕಾರ ಮತ್ತು ಸಂಬಂಧಿಸಿದ ಇಲಾಖೆಗಳು ಜಂಟಿಯಾಗಿ ಶಿಶಿಕ್ಷು ತರಬೇತಿ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಮುಂದಾಗಿವೆ ಎಂದು ಹೇಳಿದರು.

ಸ್ಥಳೀಯ ಯುವಜನರಿಗೆ ಉದ್ಯೋಗಾವಕಾಶಗಳನ್ನು ಹೆಚ್ಚಿಸುವುದು, ಕೈಗಾರಿಕೆಗಳಿಗೆ ಅಗತ್ಯವಿರುವ ಕೌಶಲ್ಯಯುತ ಮಾನವ ಸಂಪನ್ಮೂಲವನ್ನು ಸಿದ್ಧಪಡಿಸುವುದು ಹಾಗೂ ಶಿಕ್ಷಣ ಮತ್ತು ಉದ್ಯೋಗದ ನಡುವಿನ ಅಂತರವನ್ನು ಕಡಿಮೆ ಮಾಡುವುದು ಇಂತಹ ಕಾರ್ಯಾಗಾರಗಳ ಪ್ರಮುಖ ಉದ್ದೇಶವಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ವೈಟಿಪಿಎಸ್ ಕಾರ್ಯನಿರ್ವಾಹಕ ಅಧಿಕಾರಿ ಕೃಷ್ಣರಾಜ್, ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಪರಮೇಶ್ವ, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ರಾಜಶೇಖರ ಪಾಟೀಲ್, ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯ ಸುರೇಶ್ ಎಂ., ಉದ್ಯೋಗಾಧಿಕಾರಿ ನವೀನ್ ಕುಮಾರ್, ಜಿಲ್ಲಾ ವಾಣಿಜ್ಯ ಮಂಡಳಿಯ ಅಧ್ಯಕ್ಷ ಕಮಲ ಕುಮಾರ್, ರಾಯಚೂರು ಹತ್ತಿ ಮತ್ತು ಒತ್ತುವ ಸಂಘದ ಜಿಲ್ಲಾಧ್ಯಕ್ಷ ಲಕ್ಷ್ಮೀ ರೆಡ್ಡಿ, ಅಕ್ಕಿ ಗಿರಣಿ ಸಂಘದ ಕೋಶಿಕ, ಚುನಾವಣಾ ತರಬೇತಿದಾರ ಸದಾಶಿವಪ್ಪ, ಮಡಿವಾಳಪ್ಪ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಕೈಗಾರಿಕೆಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

ಗಟ್ಟುಬಿಚ್ಚಾಲಿ ಗ್ರಾಮದಲ್ಲಿ ನ್ಯಾಯಬೆಲೆ ಅಂಗಡಿ ಸ್ಥಾಪನೆಗೆ ಗ್ರಾಮಸ್ಥರ ಆಗ್ರಹ

ರಾಯಚೂರು: ತಾಲೂಕಿನ ಎಲೆಬಿಚ್ಚಾಲಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗಟ್ಟುಬಿಚ್ಚಾಲಿ ಗ್ರಾಮದಲ್ಲಿ ನ್ಯಾಯಬೆಲೆ ಅಂಗಡಿ ಇಲ್ಲದಿರುವುದರಿಂದ ಪಡಿತರ ಸಾಮಗ್ರಿ ಪಡೆಯಲು ಗ್ರಾಮಸ್ಥರು ತೀವ್ರ ತೊಂದರೆ ಅನುಭವಿಸುತ್ತಿದ್ದು, ಗ್ರಾಮದಲ್ಲಿಯೇ ಹೊಸ ನ್ಯಾಯಬೆಲೆ ಅಂಗಡಿ ಆರಂಭಿಸುವಂತೆ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಅಧಿಕಾರಿಗಳಿಗೆ ಒತ್ತಾಯಿಸಿದ್ದಾರೆ.

ಗಟ್ಟುಬಿಚ್ಚಾಲಿ ಗ್ರಾಮದ ಪಡಿತರ ಚೀಟಿದಾರರು ಪ್ರಸ್ತುತ ಹೀರಾಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬಿ. ಹನುಮಾಪುರ ಗ್ರಾಮದಲ್ಲಿರುವ ನ್ಯಾಯಬೆಲೆ ಅಂಗಡಿಯನ್ನು ಅವಲಂಬಿಸಿದ್ದಾರೆ. ಪಡಿತರ ಸಾಮಗ್ರಿ ಪಡೆಯಲು ಸುಮಾರು ನಾಲ್ಕು ಕಿಲೋಮೀಟರ್ ದೂರ ಪ್ರಯಾಣಿಸಬೇಕಾದ ಪರಿಸ್ಥಿತಿ ಎದುರಾಗಿದ್ದು, ಇದರಿಂದ ಗ್ರಾಮಸ್ಥರಿಗೆ ಅನಗತ್ಯ ಸಮಯ ಮತ್ತು ಶ್ರಮ ವ್ಯಯವಾಗುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ವಿಶೇಷವಾಗಿ ಗ್ರಾಮಕ್ಕೆ ಸಮರ್ಪಕ ಬಸ್ ಸೌಲಭ್ಯ ಇಲ್ಲದಿರುವುದರಿಂದ ವೃದ್ಧರು, ಗರ್ಭಿಣಿಯರು, ಅಂಗವಿಕಲರು ಹಾಗೂ ದಿನಗೂಲಿ ಕಾರ್ಮಿಕರು ಪಡಿತರ ಪಡೆಯಲು ಪರದಾಡುವಂತಾಗಿದೆ. ಮಳೆಗಾಲದಲ್ಲಿ ರಸ್ತೆಗಳಲ್ಲಿ ಸಂಚರಿಸುವುದು ಮತ್ತಷ್ಟು ಕಷ್ಟಕರವಾಗುತ್ತಿದ್ದು, ಅಗತ್ಯ ಆಹಾರಧಾನ್ಯಗಳನ್ನು ಮನೆಗೆ ತರುವುದು ಗ್ರಾಮಸ್ಥರಿಗೆ ಸಮಸ್ಯೆಯಾಗಿದೆ ಎಂದು ತಿಳಿಸಿದ್ದಾರೆ.

ಸಾರ್ವಜನಿಕ ವಿತರಣಾ ವ್ಯವಸ್ಥೆಯ ಉದ್ದೇಶವೇ ಅರ್ಹ ಫಲಾನುಭವಿಗಳಿಗೆ ಸುಲಭವಾಗಿ ಆಹಾರಧಾನ್ಯಗಳನ್ನು ತಲುಪಿಸುವುದಾಗಿದೆ. ಆದರೆ ಗ್ರಾಮದಲ್ಲಿಯೇ ನ್ಯಾಯಬೆಲೆ ಅಂಗಡಿ ಇಲ್ಲದ ಕಾರಣ ಜನರು ದೂರದ ಊರಿಗೆ ತೆರಳಿ ಪಡಿತರ ಪಡೆಯಬೇಕಾಗಿದೆ. ಇದರಿಂದ ವಿಶೇಷವಾಗಿ ಆರ್ಥಿಕವಾಗಿ ಹಿಂದುಳಿದ ಕುಟುಂಬಗಳು ಹಾಗೂ ಕೂಲಿ ಕೆಲಸವನ್ನು ಅವಲಂಬಿಸಿರುವ ಜನರಿಗೆ ತೊಂದರೆಯಾಗುತ್ತಿದೆ ಎಂದು ಗ್ರಾಮಸ್ಥರು ಅಳಲು ತೋಡಿಕೊಂಡಿದ್ದಾರೆ.

ಈ ಹಿನ್ನೆಲೆಯಲ್ಲಿ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಅಧಿಕಾರಿಗಳು ಗಟ್ಟುಬಿಚ್ಚಾಲಿ ಗ್ರಾಮದ ಜನಸಂಖ್ಯೆ, ಪಡಿತರ ಚೀಟಿದಾರರ ಸಂಖ್ಯೆ ಹಾಗೂ ಸಾರ್ವಜನಿಕರ ಅಗತ್ಯತೆಗಳನ್ನು ಪರಿಶೀಲಿಸಿ, ಸರ್ಕಾರದ ನಿಯಮಾನುಸಾರ ಹೊಸ ನ್ಯಾಯಬೆಲೆ ಅಂಗಡಿ ಮಂಜೂರು ಮಾಡಲು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

ಗ್ರಾಮದಲ್ಲಿ ನ್ಯಾಯಬೆಲೆ ಅಂಗಡಿ ಆರಂಭಿಸಲು ಅರ್ಜಿ ಆಹ್ವಾನಿಸಿ, ಅರ್ಹರಿಗೆ ಅನುಮತಿ ನೀಡುವ ಮೂಲಕ ಸಾರ್ವಜನಿಕ ವಿತರಣಾ ವ್ಯವಸ್ಥೆಯನ್ನು ಸುಗಮಗೊಳಿಸಬೇಕು. ಸಂಬಂಧಪಟ್ಟ ಅಧಿಕಾರಿಗಳು ಗ್ರಾಮಸ್ಥರ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ ಶೀಘ್ರ ಕ್ರಮ ಕೈಗೊಳ್ಳಬೇಕು ಎಂದು ಗಟ್ಟುಬಿಚ್ಚಾಲಿ ಗ್ರಾಮಸ್ಥರು ಆಗ್ರಹಿಸಿದ್ದಾರೆ.

ಕರವೇ ಸ್ವಾಭಿಮಾನಿ ಸೇನೆ ಹೋರಾಟಕ್ಕೆ ಸ್ಪಂದನೆ: ಆಸ್ಪತ್ರೆಗೆ ಚರ್ಮರೋಗ ತಜ್ಞರ ನೇಮಕ



ಲಿಂಗಸುಗೂರು: ಪಟ್ಟಣದ ತಾಲೂಕು ಸಾರ್ವಜನಿಕ ಆಸ್ಪತ್ರೆಗೆ ತಜ್ಞ ವೈದ್ಯರನ್ನು ನೇಮಕ ಮಾಡುವಂತೆ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆಯ ತಾಲೂಕು ಘಟಕ ನಡೆಸಿದ್ದ ಹೋರಾಟಕ್ಕೆ ಸ್ಪಂದನೆ ದೊರೆತಿದ್ದು, ಚರ್ಮರೋಗ ತಜ್ಞ ಡಾ. ಮಲ್ಲೇಶ ಅವರನ್ನು ನೇಮಕ ಮಾಡಲಾಗಿದೆ.

ತಾಲೂಕು ಸಾರ್ವಜನಿಕ ಆಸ್ಪತ್ರೆಯಲ್ಲಿ ತಜ್ಞ ವೈದ್ಯರ ಕೊರತೆಯಿಂದ ಸಾರ್ವಜನಿಕರಿಗೆ ಉಂಟಾಗುತ್ತಿರುವ ತೊಂದರೆಗಳನ್ನು ನಿವಾರಿಸುವಂತೆ ಒತ್ತಾಯಿಸಿ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆಯ ತಾಲೂಕು ಘಟಕದ ಪದಾಧಿಕಾರಿಗಳು ಸೆಪ್ಟೆಂಬರ್ 7ರಂದು ಪ್ರತಿಭಟನೆ ನಡೆಸಿದ್ದರು.

ಈ ಸಂದರ್ಭದಲ್ಲಿ ಭಾರತ ಸರ್ಕಾರದ ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯದ ವಾಣಿಜ್ಯ ಇಲಾಖೆಯ ಜಂಟಿ ಕಾರ್ಯದರ್ಶಿಗಳಿಗೆ ಮನವಿ ಸಲ್ಲಿಸಿ, ಆಸ್ಪತ್ರೆಗೆ ಅಗತ್ಯವಿರುವ ತಜ್ಞ ವೈದ್ಯರನ್ನು ನೇಮಕ ಮಾಡುವಂತೆ ಒತ್ತಾಯಿಸಲಾಗಿತ್ತು.

ಸಂಘಟನೆಯ ಮನವಿಗೆ ಸ್ಪಂದಿಸಿದ ಹಿನ್ನೆಲೆಯಲ್ಲಿ ತಾಲೂಕು ಸಾರ್ವಜನಿಕ ಆಸ್ಪತ್ರೆಗೆ ಚರ್ಮರೋಗ ತಜ್ಞ ಡಾ. ಮಲ್ಲೇಶ ಅವರನ್ನು ನೇಮಕ ಮಾಡಲಾಗಿದ್ದು, ಅವರು ಕರ್ತವ್ಯಕ್ಕೆ ಹಾಜರಾಗಿ ಸೇವೆ ಆರಂಭಿಸಿದ್ದಾರೆ ಎಂದು ಸಂಘಟನೆಯ ಪದಾಧಿಕಾರಿಗಳು ತಿಳಿಸಿದ್ದಾರೆ.

ತಜ್ಞ ವೈದ್ಯರ ನೇಮಕಕ್ಕೆ ಸ್ಪಂದಿಸಿದ ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯದ ವಾಣಿಜ್ಯ ಇಲಾಖೆಯ ಜಂಟಿ ಕಾರ್ಯದರ್ಶಿಗಳು ಹಾಗೂ ಲಿಂಗಸುಗೂರು ತಾಲೂಕು ಸಾರ್ವಜನಿಕ ಆಸ್ಪತ್ರೆಯ ಮುಖ್ಯ ವೈದ್ಯಾಧಿಕಾರಿಗಳಿಗೆ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆಯ ತಾಲೂಕು ಘಟಕದ ವತಿಯಿಂದ ಅಭಿನಂದನೆ ಸಲ್ಲಿಸಲಾಯಿತು.

ಇದೇ ವೇಳೆ ಮಾತನಾಡಿದ ಸಂಘಟನೆಯ ಪದಾಧಿಕಾರಿಗಳು, ತಾಲೂಕು ಸಾರ್ವಜನಿಕ ಆಸ್ಪತ್ರೆಗೆ ಚರ್ಮರೋಗ ತಜ್ಞರ ನೇಮಕವಾಗಿರುವುದು ಸ್ವಾಗತಾರ್ಹ ಬೆಳವಣಿಗೆಯಾಗಿದೆ. ಆದರೆ ಆಸ್ಪತ್ರೆಯಲ್ಲಿ ಇನ್ನೂ ಕೆಲವು ತಜ್ಞ ವೈದ್ಯರ ಅಗತ್ಯವಿದ್ದು, ಸಾರ್ವಜನಿಕರಿಗೆ ಸಮರ್ಪಕ ಆರೋಗ್ಯ ಸೇವೆ ದೊರೆಯುವಂತಾಗಬೇಕು. ವಿಶೇಷವಾಗಿ ಕಿವಿ, ಮೂಗು ಮತ್ತು ಗಂಟಲು ತಜ್ಞರನ್ನು ಆದಷ್ಟು ಶೀಘ್ರ ನೇಮಕ ಮಾಡಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆಯ ತಾಲೂಕು ಘಟಕದ ಅಧ್ಯಕ್ಷ ಜಿಲಾನಿ ಪಾಷಾ, ರವಿಕುಮಾರ ಬರಗುಡಿ, ಅಜೀಜ್ ಪಾಷಾ, ಬಾಬಾ ಸೇರಿದಂತೆ ಸಂಘಟನೆಯ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ಸರಳ ವಿವಾಹಗಳಿಂದ ದುಂದುವೆಚ್ಚಕ್ಕೆ ಕಡಿವಾಣ ಸಾಧ್ಯ: ಸಂಸದ ಜಿ. ಕುಮಾರ ನಾಯಕ



ಜಾಲಹಳ್ಳಿ: ದೇವದುರ್ಗ ತಾಲೂಕಿನ ಜಾಲಹಳ್ಳಿಯ ಸುಕ್ಷೇತ್ರ ಶ್ರೀ ಲಕ್ಷ್ಮೀ ರಂಗನಾಥ ದೇವಸ್ಥಾನದ ಆವರಣದಲ್ಲಿ ಗುರುವಾರ ಆಯೋಜಿಸಿದ್ದ ಸಾಮೂಹಿಕ ವಿವಾಹ ಸಮಾರಂಭದಲ್ಲಿ ರಾಯಚೂರುಯಾದಗಿರಿ ಲೋಕಸಭಾ ಕ್ಷೇತ್ರದ ಸಂಸದ ಜಿ. ಕುಮಾರ ನಾಯಕ ಭಾಗವಹಿಸಿ, ದಾಂಪತ್ಯ ಜೀವನಕ್ಕೆ ಕಾಲಿಟ್ಟ ನವಜೋಡಿಗಳಿಗೆ ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ವಿವಾಹದ ಹೆಸರಿನಲ್ಲಿ ನಡೆಯುವ ಅನಗತ್ಯ ದುಂದುವೆಚ್ಚವನ್ನು ತಗ್ಗಿಸಲು ಸಾಮೂಹಿಕ ವಿವಾಹಗಳು ಉತ್ತಮ ಮಾರ್ಗವಾಗಿವೆ. ಆರ್ಥಿಕವಾಗಿ ಹಿಂದುಳಿದ ಕುಟುಂಬಗಳಿಗೆ ಇಂತಹ ಕಾರ್ಯಕ್ರಮಗಳು ನೆರವಾಗುವುದರ ಜೊತೆಗೆ ಸಮಾಜದಲ್ಲಿ ಸರಳತೆ, ಸಮಾನತೆ ಹಾಗೂ ಪರಸ್ಪರ ಸಹಕಾರದ ಮನೋಭಾವ ಬೆಳೆಸಲು ಸಹಕಾರಿಯಾಗುತ್ತವೆ ಎಂದು ಅಭಿಪ್ರಾಯಪಟ್ಟರು.

ವಿವಾಹವೆಂದರೆ ಕೇವಲ ಇಬ್ಬರು ವ್ಯಕ್ತಿಗಳ ನಡುವಿನ ಸಂಬಂಧವಲ್ಲ. ಎರಡು ಕುಟುಂಬಗಳನ್ನು ಬೆಸೆಯುವ ಪವಿತ್ರ ಬಂಧವಾಗಿದೆ. ದಾಂಪತ್ಯ ಜೀವನದಲ್ಲಿ ಪರಸ್ಪರ ಗೌರವ, ನಂಬಿಕೆ, ಪ್ರೀತಿ ಹಾಗೂ ಹೊಂದಾಣಿಕೆಗೆ ಹೆಚ್ಚಿನ ಮಹತ್ವ ನೀಡಬೇಕು. ಹೊಸ ಜೀವನ ಆರಂಭಿಸಿರುವ ದಂಪತಿಗಳು ಸುಖ, ಶಾಂತಿ ಮತ್ತು ನೆಮ್ಮದಿಯಿಂದ ಬಾಳುವಂತಾಗಲಿ ಎಂದು ಹಾರೈಸಿದರು.

ಸಾಮಾಜಿಕ ಕಳಕಳಿಯಿಂದ ಆಯೋಜಿಸುವ ಸಾಮೂಹಿಕ ವಿವಾಹಗಳು ಆರ್ಥಿಕ ಹೊರೆ ಕಡಿಮೆ ಮಾಡುವುದರೊಂದಿಗೆ ಸಮಾಜದ ವಿವಿಧ ವರ್ಗಗಳ ಜನರನ್ನು ಒಂದೇ ವೇದಿಕೆಯಲ್ಲಿ ಒಗ್ಗೂಡಿಸುತ್ತವೆ. ಇಂತಹ ಕಾರ್ಯಕ್ರಮಗಳಿಗೆ ಸಮಾಜದ ಎಲ್ಲ ವರ್ಗದ ಜನರು ಪ್ರೋತ್ಸಾಹ ನೀಡುವ ಅಗತ್ಯವಿದೆ ಎಂದು ತಿಳಿಸಿದರು.

ಸಮಾರಂಭದ ಸಾನ್ನಿಧ್ಯ ವಹಿಸಿದ್ದ ಶ್ರೀ ಕಾಶಿ ಜಗದ್ಗುರುಗಳು, ಶ್ರೀ ಜಯಶಾಂತ ಲಿಂಗೇಶ್ವರ ಸ್ವಾಮೀಜಿ ಹಾಗೂ ಮುಂಡರಗಿ ತಾತನವರು ನವವಿವಾಹಿತರಿಗೆ ಆಶೀರ್ವಚನ ನೀಡಿ, ದಾಂಪತ್ಯ ಜೀವನದಲ್ಲಿ ಧರ್ಮ, ಸಂಸ್ಕಾರ ಮತ್ತು ಮಾನವೀಯ ಮೌಲ್ಯಗಳನ್ನು ಅಳವಡಿಸಿಕೊಂಡು ಆದರ್ಶ ಕುಟುಂಬ ಜೀವನ ನಡೆಸುವಂತೆ ಶುಭ ಹಾರೈಸಿದರು.

ಶ್ರೀ ಲಕ್ಷ್ಮೀ ರಂಗನಾಥ ದೇವಸ್ಥಾನದ ಆವರಣದಲ್ಲಿ ನಡೆದ ವಿವಾಹ ಸಮಾರಂಭವು ಧಾರ್ಮಿಕ ಹಾಗೂ ಸಾಮಾಜಿಕ ಸೌಹಾರ್ದತೆಯ ವಾತಾವರಣಕ್ಕೆ ಸಾಕ್ಷಿಯಾಯಿತು. ನವಜೋಡಿಗಳ ಕುಟುಂಬಸ್ಥರು, ಬಂಧುಬಳಗ, ಭಕ್ತಾದಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ನವದಂಪತಿಗಳಿಗೆ ಶುಭ ಕೋರಿದರು.

ಈ ಸಂದರ್ಭದಲ್ಲಿ ವಿವಿಧ ರಾಜಕೀಯ ಪಕ್ಷಗಳ ಮುಖಂಡರು, ಸ್ಥಳೀಯ ಗಣ್ಯರು ಹಾಗೂ ದೇವಸ್ಥಾನದ ಭಕ್ತರು ಉಪಸ್ಥಿತರಿದ್ದರು.

ದಲಿತರ ಮೇಲಿನ ದೌರ್ಜನ್ಯ ಖಂಡಿಸಿ ನ. 8 ರಂದು ತಿಡಿಗೋಳ ಚಲೋ ಹೋರಾಟಕ್ಕೆ ಕರೆ



ಸಿಂಧನೂರು: ತಾಲೂಕಿನ ತಿಡಿಗೋಳ ಗ್ರಾಮದಲ್ಲಿ ದಲಿತರ ಮೇಲೆ ನಡೆದಿರುವ ದೌರ್ಜನ್ಯ ಹಾಗೂ ಸಾಮಾಜಿಕ ಬಹಿಷ್ಕಾರದ ಆರೋಪಗಳನ್ನು ಖಂಡಿಸಿ ನವೆಂಬರ್ 8ರಂದು ತಿಡಿಗೋಳ ಚಲೋ ಬೃಹತ್ ಪ್ರತಿಭಟನಾ ಹೋರಾಟ ಹಮ್ಮಿಕೊಳ್ಳಲಾಗಿದೆ ಎಂದು ದಲಿತ ಹಾಗೂ ಪ್ರಗತಿಪರ ಸಂಘಟನೆಗಳ ಒಕ್ಕೂಟದ ಮುಖಂಡ, ವಕೀಲ ಶೇಖರಪ್ಪ ದುಮತಿ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ತಿಡಿಗೋಳ ಗ್ರಾಮದಲ್ಲಿ ಆಂಜನೇಯ ಸ್ವಾಮಿ ಜಾತ್ರೆಯ ಸಂದರ್ಭದಲ್ಲಿ ನಡೆದ ಘಟನೆಗೆ ಸಂಬಂಧಿಸಿದಂತೆ ದಲಿತ ಸಮುದಾಯದವರ ಮೇಲೆ ದೌರ್ಜನ್ಯ ನಡೆದಿದೆ. ಘಟನೆ ಬಳಿಕ ಗ್ರಾಮದಲ್ಲಿ ಉಂಟಾಗಿರುವ ಜಾತಿ ಸಂಘರ್ಷ ಹಾಗೂ ಸಾಮಾಜಿಕ ಬಹಿಷ್ಕಾರದ ಸಮಸ್ಯೆಯನ್ನು ಪರಿಹರಿಸುವಲ್ಲಿ ಜಿಲ್ಲಾಡಳಿತ ಮತ್ತು ತಾಲೂಕು ಆಡಳಿತ ವಿಫಲವಾಗಿವೆ ಎಂದು ಆರೋಪಿಸಿದರು.

ಘಟನೆಗೆ ಸಂಬಂಧಿಸಿದಂತೆ 71 ಜನರ ವಿರುದ್ಧ ದಾಖಲಿಸಿರುವ ಪ್ರತಿದೂರು ಪ್ರಕರಣವನ್ನು (ಕೌಂಟರ್ ಕೇಸ್) ಹಿಂಪಡೆಯಬೇಕು. ಸಾಮಾಜಿಕ ಬಹಿಷ್ಕಾರಕ್ಕೆ ಒಳಗಾಗಿದ್ದಾರೆ ಎನ್ನಲಾದ ದಲಿತ ಕುಟುಂಬಗಳಿಗೆ ತುರ್ತಾಗಿ ಉಚಿತ ಆಹಾರಧಾನ್ಯ ವಿತರಿಸಬೇಕು. ಸಂತ್ರಸ್ತ ಕುಟುಂಬಗಳಿಗೆ ಸೂಕ್ತ ರಕ್ಷಣೆ ಒದಗಿಸುವುದರ ಜತೆಗೆ ನಿರಂತರ ದೌರ್ಜನ್ಯ ಎಸಗುತ್ತಿರುವ ಆರೋಪ ಎದುರಿಸುತ್ತಿರುವ ವ್ಯಕ್ತಿಗಳ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಗ್ರಾಮದಲ್ಲಿ ದೌರ್ಜನ್ಯ ನಡೆಸುತ್ತಿರುವ ಆರೋಪ ಎದುರಿಸುತ್ತಿರುವ ಪ್ರಭಾವಿ ವ್ಯಕ್ತಿಗಳ ವಿರುದ್ಧ ಗೂಂಡಾ ಕಾಯ್ದೆಯಡಿ ಕ್ರಮ ಕೈಗೊಂಡು ಗಡಿಪಾರು ಮಾಡಬೇಕು. ದಲಿತ ಕುಟುಂಬಗಳು ಭಯಮುಕ್ತ ವಾತಾವರಣದಲ್ಲಿ ಜೀವನ ನಡೆಸಲು ಸರ್ಕಾರ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ತಿಡಿಗೋಳ ಗ್ರಾಮದಲ್ಲಿ ಇಂದಿಗೂ ಜಾತಿ ಆಧಾರಿತ ತಾರತಮ್ಯ ಮತ್ತು ಸಾಮಾಜಿಕ ಬಹಿಷ್ಕಾರದಂತಹ ಸಮಸ್ಯೆಗಳು ಮುಂದುವರಿದಿವೆ. ಇವುಗಳನ್ನು ತಡೆಗಟ್ಟಲು ಸಂಬಂಧಿಸಿದ ಅಧಿಕಾರಿಗಳು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಿಲ್ಲ. ಸಂತ್ರಸ್ತ ಕುಟುಂಬಗಳಿಗೆ ನ್ಯಾಯ ದೊರಕಿಸಿಕೊಡುವಲ್ಲಿ ಆಡಳಿತ ವ್ಯವಸ್ಥೆ ನಿರ್ಲಕ್ಷ್ಯ ವಹಿಸಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಮಸ್ಕಿ ಶಾಸಕ ಬಸನಗೌಡ ತುರುವಿಹಾಳ ಅವರು ಇದುವರೆಗೂ ತಿಡಿಗೋಳ ಗ್ರಾಮಕ್ಕೆ ಭೇಟಿ ನೀಡಿ ಸಂತ್ರಸ್ತ ಕುಟುಂಬಗಳ ಸಮಸ್ಯೆ ಆಲಿಸಿಲ್ಲ ಎಂದು ಟೀಕಿಸಿದ ಶೇಖರಪ್ಪ ದುಮತಿ, ರಾಜಕೀಯ ಕಾರಣಗಳಿಂದ ಗ್ರಾಮಕ್ಕೆ ಭೇಟಿ ನೀಡಲು ಹಿಂದೇಟು ಹಾಕುತ್ತಿದ್ದಾರೆಯೇ ಎಂದು ಪ್ರಶ್ನಿಸಿದರು.

ನವೆಂಬರ್ 8ರಂದು ನಡೆಯಲಿರುವ ತಿಡಿಗೋಳ ಚಲೋ ಹೋರಾಟದಲ್ಲಿ ವಿವಿಧ ದಲಿತ ಹಾಗೂ ಪ್ರಗತಿಪರ ಸಂಘಟನೆಗಳ ಮುಖಂಡರು, ಕಾರ್ಯಕರ್ತರು ಮತ್ತು ಸಾರ್ವಜನಿಕರು ಭಾಗವಹಿಸಲಿದ್ದಾರೆ. ಹೋರಾಟದ ಮೂಲಕ ಸಂತ್ರಸ್ತರಿಗೆ ನ್ಯಾಯ ಒದಗಿಸುವಂತೆ ಒತ್ತಾಯಿಸಿ ಸರ್ಕಾರಕ್ಕೆ ಮನವಿ ಸಲ್ಲಿಸಲಾಗುವುದು ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಸಿಂಧನೂರು ತಾಲೂಕಿನ ಕೆಲವು ಇಲಾಖೆಗಳ ಅಧಿಕಾರಿಗಳು ಪದೇಪದೇ ವರ್ಗಾವಣೆಯಾಗಿ ಮತ್ತೆ ಅದೇ ಸ್ಥಳಕ್ಕೆ ನಿಯೋಜನೆಗೊಳ್ಳುತ್ತಿರುವ ಕುರಿತು ಮಾಧ್ಯಮ ಪ್ರತಿನಿಧಿಗಳು ಪ್ರಶ್ನಿಸಿದರು. ಸರ್ಕಾರದ ವರ್ಗಾವಣೆ ನಿಯಮಗಳನ್ನು ಉಲ್ಲಂಘಿಸಿ ಅಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿದ್ದರೆ, ಅಂತಹ ಪ್ರಕರಣಗಳ ವಿರುದ್ಧವೂ ಸಂಘಟಿತವಾಗಿ ಧ್ವನಿ ಎತ್ತಬೇಕಾಗಿದೆ ಎಂದು ಮುಖಂಡರು ಪ್ರತಿಕ್ರಿಯಿಸಿದರು.

ಈ ಸಂದರ್ಭದಲ್ಲಿ ಡಿ.ಎಚ್. ಪೂಜಾರ, ವೆಂಕಟೇಶ ಗಿರಿಜಾಲಿ, ಸಾಲೊಮನ್, ಹುಸೇನಪ್ಪ, ಭಾಷುಮಿಯಾ, ಬಿ.ಎನ್. ಯರದಿಹಾಳ, ಮಂಜುನಾಥ ಸೇರಿದಂತೆ ವಿವಿಧ ಸಂಘಟನೆಗಳ ಮುಖಂಡರು ಉಪಸ್ಥಿತರಿದ್ದರು.

ಗ್ರಾಮಗಳ ಸಮಗ್ರ ಅಭಿವೃದ್ಧಿಗೆ ಗ್ರಾಮಾಭಿವೃದ್ಧಿ ಸಮಿತಿಗಳ ಪಾತ್ರ ಮಹತ್ವದ್ದು: ಫಾ. ಶಾಂತರಾಜ



ಮಾನ್ವಿ: ಗ್ರಾಮೀಣ ಪ್ರದೇಶಗಳ ಸಮಗ್ರ ಅಭಿವೃದ್ಧಿಯಲ್ಲಿ ಗ್ರಾಮಾಭಿವೃದ್ಧಿ ಸಮಿತಿಗಳು ಪ್ರಮುಖ ಪಾತ್ರ ವಹಿಸುತ್ತವೆ. ಗ್ರಾಮಸ್ಥರು ಸಂಘಟಿತರಾಗಿ ತಮ್ಮ ಊರಿನ ಸಮಸ್ಯೆಗಳನ್ನು ಗುರುತಿಸಿ, ಅವುಗಳ ಪರಿಹಾರಕ್ಕೆ ಮುಂದಾದಾಗ ಮಾತ್ರ ಗ್ರಾಮಗಳ ಸರ್ವತೋಮುಖ ಅಭಿವೃದ್ಧಿ ಸಾಧ್ಯ ಎಂದು ಲೊಯೋಲ ಸಮಾಜ ಸೇವಾ ಕೇಂದ್ರದ ಕ್ಷೇತ್ರಾಧಿಕಾರಿ ಫಾ. ಶಾಂತರಾಜ ಎಸ್. ಜೆ. ಹೇಳಿದರು.

ಪಟ್ಟಣದ ಲೊಯೋಲ ಸಮಾಜ ಸೇವಾ ಕೇಂದ್ರದಲ್ಲಿ ಸ್ವಸಹಾಯ ಸಂಘಗಳ ಪ್ರತಿನಿಧಿಗಳು ಹಾಗೂ ಗ್ರಾಮೀಣ ಭಾಗದ ಮುಖಂಡರಿಗಾಗಿ ಆಯೋಜಿಸಿದ್ದ ಗ್ರಾಮಾಭಿವೃದ್ಧಿ ಸಮಿತಿಗಳ ರಚನೆ ಕುರಿತ ತರಬೇತಿ ಕಾರ್ಯಾಗಾರವನ್ನು ಗ್ರಾಮಾಭಿವೃದ್ಧಿ ಸಮಿತಿಯ ಪೀಠಿಕೆ ಓದುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಗ್ರಾಮಗಳ ಅಭಿವೃದ್ಧಿ ಕೇವಲ ಸರ್ಕಾರದ ಯೋಜನೆಗಳಿಂದ ಮಾತ್ರ ಸಾಧ್ಯವಿಲ್ಲ. ಸ್ಥಳೀಯ ಜನರ ಸಕ್ರಿಯ ಪಾಲ್ಗೊಳ್ಳುವಿಕೆ, ಸಂಘಟಿತ ಪ್ರಯತ್ನ ಹಾಗೂ ಸಮುದಾಯದ ಸಹಕಾರವೂ ಅಗತ್ಯವಾಗಿದೆ. ಈ ನಿಟ್ಟಿನಲ್ಲಿ ಗ್ರಾಮಾಭಿವೃದ್ಧಿ ಸಮಿತಿಗಳು ಗ್ರಾಮಸ್ಥರ ಸಮಸ್ಯೆಗಳಿಗೆ ಸ್ಪಂದಿಸುವ ವೇದಿಕೆಗಳಾಗಿ ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದರು.

ಲೊಯೋಲ ಸಮಾಜ ಸೇವಾ ಕೇಂದ್ರವು ಗ್ರಾಮೀಣ ಪ್ರದೇಶಗಳಲ್ಲಿ ಸ್ವಸಹಾಯ ಸಂಘಗಳು, ಯುವಕರ ಸಂಘಟನೆಗಳು, ಕಟ್ಟಡ ಕಾರ್ಮಿಕರ ಗುಂಪುಗಳು ಹಾಗೂ ಕಲಿಕಾ ಕೇಂದ್ರಗಳ ಮೂಲಕ ವಿವಿಧ ಸಮುದಾಯಗಳಿಗೆ ಅಗತ್ಯ ತರಬೇತಿ ಮತ್ತು ಮಾರ್ಗದರ್ಶನ ನೀಡುತ್ತಿದೆ. ಜನರಲ್ಲಿ ನಾಯಕತ್ವ ಗುಣ ಬೆಳೆಸುವುದರ ಜತೆಗೆ ತಮ್ಮ ಹಕ್ಕುಗಳು ಹಾಗೂ ಸರ್ಕಾರದ ಸೌಲಭ್ಯಗಳ ಕುರಿತು ಅರಿವು ಮೂಡಿಸುವ ಕಾರ್ಯ ಮಾಡಲಾಗುತ್ತಿದೆ ಎಂದರು.

ಮುಂಡಗೋಡದ ಲೊಯೋಲ ವಿಕಾಸ ಕೇಂದ್ರದ ಸಂಯೋಜಕ ಲಕ್ಷ್ಮಣ ಉಪನ್ಯಾಸ ನೀಡಿ, ಪ್ರತಿಯೊಂದು ಗ್ರಾಮದಲ್ಲಿಯೂ ಸ್ಥಳೀಯ ಅಗತ್ಯಗಳಿಗೆ ಅನುಗುಣವಾಗಿ ಗ್ರಾಮಾಭಿವೃದ್ಧಿ ಸಮಿತಿಗಳನ್ನು ರಚಿಸಬೇಕು. ಶಿಕ್ಷಣ, ಮೂಲಸೌಕರ್ಯ, ಆರೋಗ್ಯ, ಉದ್ಯೋಗ ಮತ್ತು ಜೀವನೋಪಾಯ, ಪರಿಸರ ಸಂರಕ್ಷಣೆ, ಸಂಪನ್ಮೂಲಗಳ ಕ್ರೋಢೀಕರಣ ಹಾಗೂ ಕಲೆ ಮತ್ತು ಸಂಸ್ಕೃತಿ ಸಂರಕ್ಷಣೆ ಸೇರಿದಂತೆ ವಿವಿಧ ವಿಷಯಗಳಿಗೆ ಪ್ರತ್ಯೇಕ ಉಪಸಮಿತಿಗಳನ್ನು ರಚಿಸುವುದು ಅಗತ್ಯವಾಗಿದೆ ಎಂದು ವಿವರಿಸಿದರು.

ಈ ಸಮಿತಿಗಳಿಗೆ ಸೂಕ್ತ ಪದಾಧಿಕಾರಿಗಳನ್ನು ಆಯ್ಕೆ ಮಾಡಿ, ಅವರ ಜವಾಬ್ದಾರಿಗಳನ್ನು ನಿಗದಿಪಡಿಸಬೇಕು. ಗ್ರಾಮಗಳ ಹಿರಿಯರು, ಸಮುದಾಯದ ಮುಖಂಡರು, ಸ್ವಸಹಾಯ ಸಂಘಗಳು ಹಾಗೂ ವಿವಿಧ ಸಂಘಟನೆಗಳೊಂದಿಗೆ ಸಮನ್ವಯ ಸಾಧಿಸಿ ಕಾರ್ಯನಿರ್ವಹಿಸಿದಾಗ ಗ್ರಾಮಗಳ ಸಮಸ್ಯೆಗಳಿಗೆ ಪರಿಣಾಮಕಾರಿ ಪರಿಹಾರ ಕಂಡುಕೊಳ್ಳಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಗ್ರಾಮಾಭಿವೃದ್ಧಿ ಸಮಿತಿಗಳು ಕೇವಲ ಸಭೆಗಳನ್ನು ನಡೆಸುವುದಕ್ಕೆ ಸೀಮಿತವಾಗದೆ, ಗ್ರಾಮಗಳ ಮೂಲಭೂತ ಅಗತ್ಯಗಳನ್ನು ಗುರುತಿಸಿ ಅವುಗಳ ಈಡೇರಿಕೆಗೆ ಸಂಬಂಧಿಸಿದ ಇಲಾಖೆಗಳೊಂದಿಗೆ ನಿರಂತರ ಸಂಪರ್ಕ ಹೊಂದಿರಬೇಕು. ಸಾರ್ವಜನಿಕರ ಸಹಭಾಗಿತ್ವದಿಂದ ಅಭಿವೃದ್ಧಿ ಕಾರ್ಯಗಳನ್ನು ಕೈಗೊಂಡಾಗ ಉತ್ತಮ ಫಲಿತಾಂಶ ದೊರೆಯುತ್ತದೆ ಎಂದು ತಿಳಿಸಿದರು.

ಫಾ. ಸಿಪ್ರಿಯನ್ ಟೆಲ್ಲಿಸ್ ಮಾತನಾಡಿ, ಸರ್ಕಾರದ ವಿವಿಧ ಯೋಜನೆಗಳು ಮತ್ತು ಸೌಲಭ್ಯಗಳು ಅರ್ಹ ಫಲಾನುಭವಿಗಳಿಗೆ ತಲುಪುವಂತೆ ಮಾಡಲು ಗ್ರಾಮಸ್ಥರು ಸಂಘಟಿತರಾಗಬೇಕು. ತಮ್ಮ ಹಕ್ಕುಗಳು ಹಾಗೂ ಗ್ರಾಮಗಳ ಅಭಿವೃದ್ಧಿಗಾಗಿ ಒಗ್ಗಟ್ಟಿನಿಂದ ಪ್ರಯತ್ನಿಸುವುದು ಅಗತ್ಯವಾಗಿದೆ. ಈ ಉದ್ದೇಶದಿಂದ ಪ್ರತಿಯೊಂದು ಗ್ರಾಮದಲ್ಲಿಯೂ ಗ್ರಾಮಾಭಿವೃದ್ಧಿ ಸಮಿತಿಗಳನ್ನು ರಚಿಸಿಕೊಂಡು ಜನಪರ ಹೋರಾಟ ನಡೆಸಬೇಕು ಎಂದು ಕರೆ ನೀಡಿದರು.

ಕಾರ್ಯಾಗಾರದಲ್ಲಿ ಗ್ರಾಮಾಭಿವೃದ್ಧಿ ಸಮಿತಿಗಳ ರಚನೆ, ಪದಾಧಿಕಾರಿಗಳ ಆಯ್ಕೆ, ಜವಾಬ್ದಾರಿಗಳು ಹಾಗೂ ಸಮುದಾಯದ ಸಹಭಾಗಿತ್ವದ ಕುರಿತು ಪ್ರತಿನಿಧಿಗಳಿಗೆ ಮಾಹಿತಿ ನೀಡಲಾಯಿತು.

ಕಾರ್ಯಕ್ರಮದಲ್ಲಿ ಲೊಯೋಲ ಸಮಾಜ ಸೇವಾ ಕೇಂದ್ರದ ಸಿಬ್ಬಂದಿ, ವಿವಿಧ ಗ್ರಾಮಗಳ ಸ್ವಸಹಾಯ ಸಂಘಗಳ ಪ್ರತಿನಿಧಿಗಳು, ಗ್ರಾಮೀಣ ಮುಖಂಡರು ಹಾಗೂ ಸಂಘಟನೆಗಳ ಸದಸ್ಯರು ಭಾಗವಹಿಸಿದ್ದರು.

ಯುವಜನರಲ್ಲಿನ ಪ್ರತಿಭೆ ಗುರುತಿಸಿ ಪ್ರೋತ್ಸಾಹಿಸುವ ಕಾರ್ಯವಾಗಲಿ: ಅಯ್ಯಪ್ಪಯ್ಯ ಹುಡಾ



ರಾಯಚೂರು: ಯುವಜನರು ಪಾಶ್ಚಿಮಾತ್ಯ ಸಂಸ್ಕೃತಿಯ ಪ್ರಭಾವಕ್ಕೆ ಒಳಗಾಗದೆ ನಾಡಿನ ಕಲೆ, ಸಾಹಿತ್ಯ, ಜಾನಪದ ಹಾಗೂ ಸಾಂಸ್ಕೃತಿಕ ಪರಂಪರೆಯನ್ನು ಉಳಿಸಿ ಬೆಳೆಸುವತ್ತ ಗಮನ ಹರಿಸಬೇಕು. ಯುವ ಸಮುದಾಯದಲ್ಲಿರುವ ವಿಶಿಷ್ಟ ಪ್ರತಿಭೆಗಳನ್ನು ಗುರುತಿಸಿ ಪ್ರೋತ್ಸಾಹಿಸುವ ಕಾರ್ಯ ನಡೆಯಬೇಕು ಎಂದು ಸಾಹಿತಿ ಅಯ್ಯಪ್ಪಯ್ಯ ಹುಡಾ ಹೇಳಿದರು.

ನಗರದ ವೇದಾಂತ ಪದವಿ ಮಹಾವಿದ್ಯಾಲಯದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ವೇದಾಂತ ಪದವಿ ಕಾಲೇಜಿನ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಜಿಲ್ಲಾಮಟ್ಟದ ಯುವಜನೋತ್ಸವಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಪ್ರತಿಯೊಬ್ಬ ಯುವಕ ಮತ್ತು ಯುವತಿಯಲ್ಲಿಯೂ ವಿಶೇಷವಾದ ಸಾಮರ್ಥ್ಯ ಹಾಗೂ ಸೃಜನಶೀಲತೆ ಅಡಗಿರುತ್ತದೆ. ಅದನ್ನು ಗುರುತಿಸಿ ಸೂಕ್ತ ಅವಕಾಶ ಕಲ್ಪಿಸಿದಾಗ ಉತ್ತಮ ಕಲಾವಿದರು, ಸಾಹಿತಿಗಳು ಹಾಗೂ ಕ್ರೀಡಾಪಟುಗಳು ರೂಪುಗೊಳ್ಳಲು ಸಾಧ್ಯವಾಗುತ್ತದೆ. ಇತ್ತೀಚಿನ ದಿನಗಳಲ್ಲಿ ಯುವಪೀಳಿಗೆ ಸಂಗೀತ, ಸಾಹಿತ್ಯ, ಕಲೆ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಿಂದ ದೂರವಾಗುತ್ತಿರುವುದು ಕಳವಳಕಾರಿ ಸಂಗತಿಯಾಗಿದೆ. ಯುವಜನೋತ್ಸವದಂತಹ ಕಾರ್ಯಕ್ರಮಗಳು ಯುವಕರನ್ನು ಸಾಂಸ್ಕೃತಿಕ ಚಟುವಟಿಕೆಗಳತ್ತ ಆಕರ್ಷಿಸುವುದರ ಜತೆಗೆ ಜಾನಪದ ಸಂಸ್ಕೃತಿಯ ಜೀವಂತಿಕೆಯನ್ನು ಕಾಪಾಡಲು ಸಹಕಾರಿಯಾಗುತ್ತವೆ ಎಂದು ತಿಳಿಸಿದರು.

ಗಾಯಕ ಶರಣಪ್ಪ ಗೋನಾಳ ಮಾತನಾಡಿ, ಯುವಜನರು ಸಕಾರಾತ್ಮಕ ಚಿಂತನೆಗಳನ್ನು ಮೈಗೂಡಿಸಿಕೊಂಡು ತಮ್ಮಲ್ಲಿರುವ ಪ್ರತಿಭೆಯನ್ನು ಅಭಿವೃದ್ಧಿಪಡಿಸಿಕೊಳ್ಳಬೇಕು. ಯುವಜನೋತ್ಸವದಂತಹ ವೇದಿಕೆಗಳು ವ್ಯಕ್ತಿತ್ವ ವಿಕಸನಕ್ಕೆ ಉತ್ತಮ ಅವಕಾಶ ಒದಗಿಸುತ್ತವೆ. ವಿದ್ಯಾರ್ಥಿಗಳು ಇಂತಹ ಕಾರ್ಯಕ್ರಮಗಳಲ್ಲಿ ಸಕ್ರಿಯವಾಗಿ ಭಾಗವಹಿಸಿ ತಮ್ಮ ಸಾಮರ್ಥ್ಯವನ್ನು ಪ್ರದರ್ಶಿಸಬೇಕು ಎಂದು ಸಲಹೆ ನೀಡಿದರು.

ಪ್ರಕಾಶ ನಂದಿ ಮಾತನಾಡಿ, ಪ್ರತಿಯೊಬ್ಬರಲ್ಲಿಯೂ ಒಂದಲ್ಲೊಂದು ಕ್ಷೇತ್ರದಲ್ಲಿ ವಿಶೇಷ ಆಸಕ್ತಿ ಮತ್ತು ಪ್ರತಿಭೆ ಇರುತ್ತದೆ. ಆ ಪ್ರತಿಭೆಯನ್ನು ಹೊರತರುವಲ್ಲಿ ಸ್ಪರ್ಧೆಗಳು ಪ್ರಮುಖ ಪಾತ್ರ ವಹಿಸುತ್ತವೆ. ಯಾವುದೇ ಸ್ಪರ್ಧೆಯಲ್ಲಿ ಎಲ್ಲರೂ ಗೆಲ್ಲಲು ಸಾಧ್ಯವಿಲ್ಲ. ಆದ್ದರಿಂದ ಸೋಲು-ಗೆಲುವುಗಳನ್ನು ಸಮಾನವಾಗಿ ಸ್ವೀಕರಿಸಿ ಸ್ಪರ್ಧಾತ್ಮಕ ಮನೋಭಾವದಿಂದ ಭಾಗವಹಿಸಬೇಕು. ನಿರಂತರ ಪ್ರಯತ್ನ ಮತ್ತು ಅಭ್ಯಾಸದಿಂದ ಉತ್ತಮ ಸಾಧನೆ ಮಾಡಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಈರೇಶ ನಾಯಕ ಮಾತನಾಡಿ, ರಾಯಚೂರು ಜಿಲ್ಲೆಯ ಯುವ ಪ್ರತಿಭೆಗಳು ಜಿಲ್ಲಾಮಟ್ಟದ ಯುವಜನೋತ್ಸವವನ್ನು ಸದುಪಯೋಗಪಡಿಸಿಕೊಂಡು ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ಸಾಧನೆ ಮಾಡಬೇಕು. ಪ್ರತಿಭಾವಂತ ಯುವಜನರಿಗೆ ಇಲಾಖೆಯಿಂದ ಅಗತ್ಯ ಸಹಕಾರ ಮತ್ತು ಪ್ರೋತ್ಸಾಹ ನೀಡಲಾಗುವುದು ಎಂದು ಭರವಸೆ ನೀಡಿದರು.

ಯುವಜನೋತ್ಸವದ ಅಂಗವಾಗಿ ನಡೆದ ವಿವಿಧ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಜಿಲ್ಲೆಯ ವಿವಿಧ ಕಾಲೇಜುಗಳು ಹಾಗೂ ಯುವಕ ಸಂಘಗಳ ಸ್ಪರ್ಧಿಗಳು ಭಾಗವಹಿಸಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಿದರು.

ಜನಪದ ನೃತ್ಯ ತಂಡ ಸ್ಪರ್ಧೆಯಲ್ಲಿ ಸಿಂಧನೂರಿನ ವಿನೋದ್ ಮತ್ತು ತಂಡ ಪ್ರಥಮ ಸ್ಥಾನ ಪಡೆದರೆ, ರಾಯಚೂರಿನ ಟಾಗೋರ್ ಕಾಲೇಜು ದ್ವಿತೀಯ ಸ್ಥಾನ ಗಳಿಸಿತು.

ಜನಪದ ಗೀತೆ ತಂಡ ಸ್ಪರ್ಧೆಯಲ್ಲಿ ದೇವಸುಗೂರಿನ ಸೂಗೂರೇಶ್ವರ ಯುವಕ ಮಂಡಳಿ ಪ್ರಥಮ ಸ್ಥಾನ ಹಾಗೂ ರಾಯಚೂರು ಕೃಷಿ ವಿಶ್ವವಿದ್ಯಾಲಯದ ಕಲಾಶ್ರೀ ಮತ್ತು ತಂಡ ದ್ವಿತೀಯ ಸ್ಥಾನ ಪಡೆದುಕೊಂಡಿತು.

ವೈಯಕ್ತಿಕ ಚಿತ್ರಕಲೆ ಸ್ಪರ್ಧೆಯಲ್ಲಿ ರಾಯಚೂರು ಕೃಷಿ ವಿಶ್ವವಿದ್ಯಾಲಯದ ಆನಂದ ಸದಾಶಿವ ಪ್ರಥಮ, ಮಹಿಳಾ ಸರ್ಕಾರಿ ಪದವಿ ಕಾಲೇಜಿನ ಸುಮಯ್ಯ ದ್ವಿತೀಯ ಹಾಗೂ ಸೇವಾ ಕಾಲೇಜಿನ ಮಂಜುಳಾ ತೃತೀಯ ಸ್ಥಾನ ಗಳಿಸಿದರು.

ಕವಿತೆ ರಚನೆ ಸ್ಪರ್ಧೆಯಲ್ಲಿ ದೀಪಾ ಎ. ಶಿಂಧೆ ಪ್ರಥಮ, ಪ್ರಿಯಾಂಕ ಕರಿಯಪ್ಪ ಕುದರಿ ದ್ವಿತೀಯ ಹಾಗೂ ಉಮೇಶ ಎಂ. ಜಗಲ್ ತೃತೀಯ ಸ್ಥಾನ ಪಡೆದರು.

ಬೀದಿ ನಾಟಕ ಸ್ಪರ್ಧೆಯಲ್ಲಿ ರಾಯಚೂರಿನ ಎಸ್‌ಎಸ್‌ಎಂ ಪದವಿ ಕಾಲೇಜು (ಟಾಗೋರ್) ಪ್ರಥಮ ಸ್ಥಾನ ಹಾಗೂ ವೇದಾಂತ ಪದವಿ ಕಾಲೇಜು ದ್ವಿತೀಯ ಸ್ಥಾನ ಪಡೆದುಕೊಂಡಿತು.

ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳು ಹಾಗೂ ಕಲಾವಿದರಿಗೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಈರೇಶ ನಾಯಕ ಬಹುಮಾನ ವಿತರಿಸಿ ಅಭಿನಂದಿಸಿದರು.

ಕಾರ್ಯಕ್ರಮದಲ್ಲಿ ವೇದಾಂತ ಪದವಿ ಮಹಾವಿದ್ಯಾಲಯದ ಆಡಳಿತಾಧಿಕಾರಿ ರಾಕೇಶ ರಾಜಲಬಂಡಿ, ಪ್ರಾಂಶುಪಾಲ ತಿಮ್ಮಯ್ಯಶೆಟ್ಟಿ ಇಲ್ಲೂರು, ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು, ಕಲಾವಿದರು ಹಾಗೂ ಯುವಜನರು ಉಪಸ್ಥಿತರಿದ್ದರು.

ಮಕ್ಕಳ ಗುಣಮಟ್ಟದ ಶಿಕ್ಷಣಕ್ಕೆ ಶಿಕ್ಷಕರೊಂದಿಗೆ ಪಾಲಕರ ಸಹಕಾರ ಅಗತ್ಯ: ಪಿ. ಕೋಮಲ್



ಮಾನ್ವಿ: ಮಕ್ಕಳ ಶೈಕ್ಷಣಿಕ ಪ್ರಗತಿ ಮತ್ತು ಗುಣಮಟ್ಟದ ಕಲಿಕೆಗೆ ಶಿಕ್ಷಕರ ಪರಿಶ್ರಮದ ಜತೆಗೆ ಪಾಲಕರ ಸಹಕಾರವೂ ಅತ್ಯಂತ ಅಗತ್ಯವಾಗಿದೆ. ಮನೆಯಲ್ಲಿ ಮಕ್ಕಳಿಗೆ ಉತ್ತಮ ಕಲಿಕಾ ವಾತಾವರಣ ಕಲ್ಪಿಸುವ ಮೂಲಕ ಅವರ ಭವಿಷ್ಯ ರೂಪಿಸಲು ಪಾಲಕರು ಹೆಚ್ಚಿನ ಗಮನ ಹರಿಸಬೇಕು ಎಂದು ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯದ ವಾರ್ಡನ್ ಹಾಗೂ ಕಲ್ಮಠ ವಿದ್ಯಾಸಂಸ್ಥೆಯ ಹಳೆಯ ವಿದ್ಯಾರ್ಥಿ ಪಿ. ಕೋಮಲ್ ಹೇಳಿದರು.

ಪಟ್ಟಣದ ಕಲ್ಮಠ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಗುರುವಾರ ಆಯೋಜಿಸಿದ್ದ ಸಮುದಾಯದತ್ತ ಶಾಲಾ ಕಾರ್ಯಕ್ರಮದ ಅಂಗವಾಗಿ ನಡೆದ ಪಾಲಕರ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಮಕ್ಕಳು ಮೊಬೈಲ್ ಬಳಕೆ ಹಾಗೂ ಆನ್‌ಲೈನ್ ಆಟಗಳತ್ತ ಹೆಚ್ಚಿನ ಆಸಕ್ತಿ ತೋರುತ್ತಿರುವುದು ಅವರ ಕಲಿಕೆಯ ಮೇಲೆ ಪರಿಣಾಮ ಬೀರುವ ಸಾಧ್ಯತೆಯಿದೆ. ಆದ್ದರಿಂದ ಪಾಲಕರು ಮಕ್ಕಳ ಮೊಬೈಲ್ ಬಳಕೆಯ ಮೇಲೆ ನಿಗಾ ವಹಿಸಿ, ಓದು ಮತ್ತು ಪಠ್ಯೇತರ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವಂತೆ ಪ್ರೋತ್ಸಾಹಿಸಬೇಕು. ಮೊಬೈಲ್ ಬಿಡಿ, ಪುಸ್ತಕ ಹಿಡಿ ಎಂಬ ಸಂದೇಶವನ್ನು ಮಕ್ಕಳಿಗೆ ಮನವರಿಕೆ ಮಾಡಿಕೊಡಬೇಕು ಎಂದು ಸಲಹೆ ನೀಡಿದರು.

ಶಿಕ್ಷಣವೆಂದರೆ ಕೇವಲ ಪಠ್ಯಪುಸ್ತಕದ ಜ್ಞಾನಕ್ಕೆ ಸೀಮಿತವಾಗಬಾರದು. ಮಕ್ಕಳಲ್ಲಿ ಉತ್ತಮ ನಡವಳಿಕೆ, ಶಿಸ್ತು, ಸಂಸ್ಕಾರ ಹಾಗೂ ಮಾನವೀಯ ಮೌಲ್ಯಗಳನ್ನು ಬೆಳೆಸುವುದು ಕೂಡ ಮುಖ್ಯವಾಗಿದೆ. ಶಿಕ್ಷಕರು ಶಾಲೆಯಲ್ಲಿ ನೀಡುವ ಮಾರ್ಗದರ್ಶನಕ್ಕೆ ಮನೆಯಲ್ಲಿ ಪಾಲಕರು ಪೂರಕವಾಗಿ ಸ್ಪಂದಿಸಿದಾಗ ಮಕ್ಕಳ ಸರ್ವತೋಮುಖ ಬೆಳವಣಿಗೆ ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಕಲ್ಮಠ ಪ್ರೌಢಶಾಲೆಯ ಮುಖ್ಯಗುರು ಹಾಗೂ ಸಮುದಾಯದತ್ತ ಶಾಲಾ ಕಾರ್ಯಕ್ರಮದ ಮಾರ್ಗದರ್ಶಿ ಶಿಕ್ಷಕ ಪ್ರಭಯ್ಯಸ್ವಾಮಿ ಮಾತನಾಡಿ, ಮಕ್ಕಳಲ್ಲಿ ಶಿಸ್ತು, ಪ್ರಾಮಾಣಿಕತೆ ಮತ್ತು ಉತ್ತಮ ಸಂಸ್ಕಾರಗಳನ್ನು ಬೆಳೆಸುವಲ್ಲಿ ಪಾಲಕರ ಪಾತ್ರ ಮಹತ್ವದ್ದಾಗಿದೆ. ಮಕ್ಕಳೊಂದಿಗೆ ಆತ್ಮೀಯವಾಗಿ ಬೆರೆತು ಅವರ ಆಸಕ್ತಿ, ಸಾಮರ್ಥ್ಯ ಹಾಗೂ ಸಮಸ್ಯೆಗಳನ್ನು ಅರಿತುಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದ ವಿಶೇಷ ಆಕರ್ಷಣೆಯಾಗಿ ಪಾಲಕರಿಗಾಗಿ ವಿವಿಧ ಮನರಂಜನಾತ್ಮಕ ಹಾಗೂ ಜಾಗೃತಿ ಮೂಡಿಸುವ ಚಟುವಟಿಕೆಗಳನ್ನು ಆಯೋಜಿಸಲಾಗಿತ್ತು. ಮ್ಯೂಸಿಕಲ್ ಚೇರ್ ಆಟದ ಜತೆಗೆ ತಮ್ಮ ಮಕ್ಕಳ ಕೈಬರಹ ಗುರುತಿಸುವುದು, ಮಕ್ಕಳಿಗೆ ಇಷ್ಟವಾದ ತಿಂಡಿ, ಬಣ್ಣ ಹಾಗೂ ನೆಚ್ಚಿನ ವಿಷಯಗಳನ್ನು ತಿಳಿಸುವಂತಹ ಚಟುವಟಿಕೆಗಳನ್ನು ನಡೆಸಲಾಯಿತು.

ಮಕ್ಕಳು ಮತ್ತು ಪಾಲಕರಿಗೆ ಪ್ರತ್ಯೇಕವಾಗಿ ಪ್ರಶ್ನೆಗಳನ್ನು ಕೇಳುವ ಮೂಲಕ ಪಾಲಕರು ತಮ್ಮ ಮಕ್ಕಳ ಅಭಿರುಚಿ ಹಾಗೂ ಆಸಕ್ತಿಗಳನ್ನು ಎಷ್ಟರಮಟ್ಟಿಗೆ ಅರ್ಥಮಾಡಿಕೊಂಡಿದ್ದಾರೆ ಎಂಬುದನ್ನು ತಿಳಿಸುವ ಪ್ರಯತ್ನ ಮಾಡಲಾಯಿತು. ಈ ಚಟುವಟಿಕೆಗಳು ಪಾಲಕರಲ್ಲಿ ಮಕ್ಕಳೊಂದಿಗೆ ಹೆಚ್ಚಿನ ಸಮಯ ಕಳೆಯುವ ಮತ್ತು ಅವರ ಭಾವನೆಗಳನ್ನು ಅರ್ಥಮಾಡಿಕೊಳ್ಳುವ ಅಗತ್ಯದ ಕುರಿತು ಅರಿವು ಮೂಡಿಸಿದವು.

ವಿವಿಧ ಸ್ಪರ್ಧೆಗಳಲ್ಲಿ ಪಾಲಕರಾದ ಲಕ್ಷ್ಮಿ, ಪಾರ್ವತಿ, ಮಾಧವಿ, ಸಿರಿನ್ ರಿಜ್ವಾನ್ ಬೇಗಂ, ಸರೋಜಾ, ಮಹದೇವ್, ಶಿವಜ್ಞಾನಿ, ಹಬೀಬ್, ಲಕ್ಷ್ಮಣ್ ಸೇರಿದಂತೆ ಹಲವರು ಉತ್ಸಾಹದಿಂದ ಭಾಗವಹಿಸಿದರು. ಸ್ಪರ್ಧೆಗಳಲ್ಲಿ ವಿಜೇತರಾದ ಪಾಲಕರಿಗೆ ಬಹುಮಾನಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಲ್ಮಠ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯ ಮಂಜುನಾಥ ಕಮತರ ಮಾತನಾಡಿ, ಮಕ್ಕಳ ಶೈಕ್ಷಣಿಕ ಸಾಧನೆ ಉತ್ತಮಗೊಳ್ಳಲು ಶಾಲೆ ಮತ್ತು ಪಾಲಕರ ನಡುವೆ ನಿರಂತರ ಸಂಪರ್ಕ ಹಾಗೂ ಸಹಕಾರ ಅಗತ್ಯವಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಹಿರಿಯ ಶಿಕ್ಷಕರಾದ ಕೇಮ್ಯಾನಾಯ್ಕ, ಜಯಶ್ರೀ, ಶಾಲಾ ಸಂಸತ್ತಿನ ವಿದ್ಯಾರ್ಥಿ ಪ್ರತಿನಿಧಿಗಳಾದ ಅನಿಲ್, ಚೈತನ್ಯ, ಫಾರಾನ್, ಐಂದ್ರಿತಾ, ಸೌಜನ್ಯ, ಶಿಕ್ಷಕರಾದ ಪವಿತ್ರ, ಸೌಮ್ಯ, ರವಿ ಹುಲಿಯಾಪುರ ಹಾಗೂ ವಿದ್ಯಾರ್ಥಿಗಳು ಮತ್ತು ಪಾಲಕರು ಉಪಸ್ಥಿತರಿದ್ದರು.

ರೂಪ ಕಾರ್ಯಕ್ರಮ ನಿರೂಪಿಸಿದರು. ಮಹಾಂತಮ್ಮ ಸ್ವಾಗತಿಸಿದರು. ರಿಜ್ವಾನ್ ಬೇಗಂ ವಂದಿಸಿದರು.

ಪುನೀತ್ ರಾಜ್‌ಕುಮಾರ್ ಪುಣ್ಯಸ್ಮರಣೆ: ಸಾರ್ವಜನಿಕರಿಗೆ ಅನ್ನದಾನ



ರಾಯಚೂರು: ನಗರದ ಪೆಟ್ಲಾಬುರ್ಜ್ ಸಮೀಪದ ಗಂಗಾನಿವಾಸ ರಸ್ತೆಯಲ್ಲಿರುವ ಗಣೇಶ ಕಟ್ಟೆ ಆಟೋ ನಿಲ್ದಾಣ ಸಂಘದ ವತಿಯಿಂದ ಕರ್ನಾಟಕ ರತ್ನ ಪುನೀತ್ ರಾಜ್‌ಕುಮಾರ್ ಅವರ ಐದನೇ ವರ್ಷದ ಪುಣ್ಯಸ್ಮರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಪುನೀತ್ ರಾಜ್‌ಕುಮಾರ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಒಂದು ನಿಮಿಷ ಮೌನಾಚರಣೆ ಮೂಲಕ ಗೌರವ ನಮನ ಸಲ್ಲಿಸಲಾಯಿತು. ಬಳಿಕ ಸಾರ್ವಜನಿಕರಿಗೆ ಅನ್ನದಾನ ಮಾಡಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಆಟೋ ನಿಲ್ದಾಣ ಸಂಘದ ಸದಸ್ಯ ಸಿದ್ದು ಸೂರ್ಯವಂಶಿ, ಪುನೀತ್ ರಾಜ್‌ಕುಮಾರ್ ಅವರು ನಮ್ಮನ್ನು ಅಗಲಿದ್ದರೂ ಅವರ ನೆನಪುಗಳು ಹಾಗೂ ಆದರ್ಶಗಳು ಸದಾ ಜೀವಂತವಾಗಿವೆ. ಕರ್ನಾಟಕದ ಕರ್ಣ ಎಂದೇ ಪ್ರಸಿದ್ಧರಾಗಿದ್ದ ಅಪ್ಪು ಅವರು ಜನರ ಹೃದಯದಲ್ಲಿ ಶಾಶ್ವತ ಸ್ಥಾನ ಪಡೆದಿದ್ದಾರೆ. ಅವರು ನಮ್ಮೊಂದಿಗಿಲ್ಲ ಎಂಬ ಭಾವನೆ ಯಾರಲ್ಲಿಯೂ ಇಲ್ಲ. ಅವರ ಸಮಾಜಮುಖಿ ಕಾರ್ಯಗಳು ಇಂದಿನ ಯುವಜನತೆಗೆ ಮಾದರಿಯಾಗಬೇಕು ಎಂದು ಹೇಳಿದರು.

ಬಲಗೈಯಿಂದ ಮಾಡಿದ ದಾನ ಎಡಗೈಗೆ ತಿಳಿಯಬಾರದು ಎಂಬ ತತ್ವವನ್ನು ಪುನೀತ್ ರಾಜ್‌ಕುಮಾರ್ ಅವರು ಪಾಲಿಸುತ್ತಿದ್ದರು. ಪ್ರಚಾರವಿಲ್ಲದೆ ಮಾಡುವ ಗುಪ್ತದಾನ ಮಹಾಪುಣ್ಯ ಎಂಬ ಅವರ ಸಂದೇಶವನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಅವರ ಸರಳತೆ, ಮಾನವೀಯತೆ ಹಾಗೂ ಸೇವಾ ಮನೋಭಾವವನ್ನು ಯುವಜನರು ಅನುಸರಿಸಬೇಕು ಎಂದು ತಿಳಿಸಿದರು.

ರಾಜ್ಯ ಹಾಗೂ ಜಿಲ್ಲೆಯಲ್ಲಿ ಸಮರ್ಪಕ ಮಳೆಯಾಗದೆ ರೈತರು ತೀವ್ರ ಸಂಕಷ್ಟ ಎದುರಿಸುತ್ತಿದ್ದಾರೆ. ಬರಗಾಲದಿಂದ ರೈತರ ಬದುಕು ದುಸ್ತರವಾಗಿದ್ದು, ಮುಂದಿನ ದಿನಗಳಲ್ಲಿ ಉತ್ತಮ ಮಳೆಯಾಗಿ ಬೆಳೆಗಳು ಸಮೃದ್ಧವಾಗಿ ಬೆಳೆಯಲಿ ಹಾಗೂ ರೈತರ ಸಂಕಷ್ಟ ದೂರವಾಗಲಿ ಎಂದು ಪುನೀತ್ ರಾಜ್‌ಕುಮಾರ್ ಅವರ ಪುಣ್ಯಸ್ಮರಣೆಯ ಸಂದರ್ಭದಲ್ಲಿ ಪ್ರಾರ್ಥಿಸಲಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಗಣೇಶ ಕಟ್ಟೆ ಆಟೋ ನಿಲ್ದಾಣ ಸಂಘದ ಅಧ್ಯಕ್ಷ ಲಕ್ಷ್ಮಣ ಗಾಯಕವಾಡ, ಉಪಾಧ್ಯಕ್ಷ ಕೆ. ವೀರೇಶ, ಕೆ. ವೀರಣ್ಣ, ಜಗದೀಶ ಯಾದವ್, ಬಿ. ಪರಶುರಾಮ, ಹನುಮಂತು, ವಿರುಪಾಕ್ಷಿ, ಸಿದ್ದು ಸೂರ್ಯವಂಶಿ, ಅಲ್ಲಿಪೀರ, ರಾಘವೇಂದ್ರ, ಶಿವಾಜಿ ಸಿಂಧೆ ಹಾಗೂ ಅಪ್ಪು ಅಭಿಮಾನಿಗಳ ಬಳಗದ ಸದಸ್ಯರು ಉಪಸ್ಥಿತರಿದ್ದರು.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K